# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 69 | ರಾಯಚೂರು Raichur | 01-09-2026 | ಮಂಗಳವಾರ Tuesday | ಪುಟ: Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685


ಐದು ವರ್ಷದ ಬಳಿಕ RCB ಸ್ಟಾರ್ ಆಟಗಾರನಿಗೆ ಗುಡ್ ನ್ಯೂಸ್; ಮತ್ತೆ ಟೀಂ ಇಂಡಿಯಾಗೆ ಕೃನಾಲ್ ಪಾಂಡ್ಯ ಎಂಟ್ರಿ?



# ಮೊದಲ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಶೇ.7.8ರಷ್ಟು ಬೆಳವಣಿಗೆ




ನವದೆಹಲಿ: 2026-27ನೇ ಹಣಕಾಸು ವರ್ಷದ ಏಪ್ರಿಲ್‌ನಿಂದ ಜೂನ್‌ವರೆಗಿನ ಮೊದಲ ತ್ರೈಮಾಸಿಕದಲ್ಲಿ ಭಾರತದ ಆರ್ಥಿಕತೆ ಶೇ.7.8ರಷ್ಟು ಬೆಳವಣಿಗೆ ದಾಖಲಿಸಿದೆ. ಇರಾನ್-ಅಮೆರಿಕಾ ಸಂಘರ್ಷ, ಕಚ್ಚಾ ತೈಲ ಬೆಲೆ ಏರಿಕೆ, ವ್ಯಾಪಾರ ಅನಿಶ್ಚಿತತೆ ಹಾಗೂ ಜಾಗತಿಕ ಹಣಕಾಸು ಮಾರುಕಟ್ಟೆಯ ಏರಿಳಿತಗಳ ನಡುವೆಯೂ ದೇಶೀಯ ಆರ್ಥಿಕ ಚಟುವಟಿಕೆ ಬಲವಾಗಿ ಮುಂದುವರಿದಿರುವುದು ಈ ಬೆಳವಣಿಗೆಯಲ್ಲಿ ಪ್ರತಿಫಲಿಸಿದೆ.

ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ (MoSPI) ಸೋಮವಾರ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, 2026-27ನೇ ತ್ರೈಮಾಸಿಕದಲ್ಲಿ ಭಾರತದ ನೈಜ ಒಟ್ಟು ಹಣಕಾಸು ವರ್ಷದ ಮೊದಲ ದೇಶೀಯ ಉತ್ಪನ್ನ (ಜಿಡಿಪಿ) ವರ್ಷದಿಂದ ವರ್ಷಕ್ಕೆ ಶೇ.7.8ರಷ್ಟು ಏರಿಕೆಯಾಗಿದೆ. ಈ ಬೆಳವಣಿಗೆ ಅರ್ಥಶಾಸ್ತ್ರಜ್ಞರ ನಿರೀಕ್ಷೆಗಿಂತ ಉತ್ತಮವಾಗಿದೆ.

ಸ್ಥಿರ ಬೆಲೆಗಳಲ್ಲಿ ನೈಜ ಜಿಡಿಪಿ 81.36 ಲಕ್ಷ ಕೋಟಿ ರೂ. ಎಂದು ಅಂದಾಜಿಸಲಾಗಿದ್ದು, ಕಳೆದ ವರ್ಷದ ಇದೇ ಅವಧಿಯಲ್ಲಿ ಅದು 75.46 ಲಕ್ಷ ಕೋಟಿ ರೂ. ಆಗಿತ್ತು. ಜಾಗತಿಕ ಮಟ್ಟದಲ್ಲಿ ಕಠಿಣ ಬಾಹ್ಯ ಪರಿಸ್ಥಿತಿ ಎದುರಾಗಿದ್ದರೂ ಹೊಸ ಹಣಕಾಸು ವರ್ಷದ ಆರಂಭದಲ್ಲಿ ಭಾರತದ ಆರ್ಥಿಕ ಬೆಳವಣಿಗೆಯ ವೇಗ ಪ್ರಬಲವಾಗಿದೆ ಎಂಬುದನ್ನು ಅಂಕಿಅಂಶಗಳು ಸೂಚಿಸುತ್ತವೆ.

2026-27ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ 2ನೇ ಪುಟಕ್ಕೆ

## ಭೂಮಾನಂದ ಕುಟುಂಬಕ್ಕೆ ಶಾಸಕಿ ಕರಿಯಮ್ಮ ಜಿ. ನಾಯಕ್ ಭರವಸೆ ಹಾಗೂ ಸ್ಪಷ್ಟನೆ



ದೇವದುರ್ಗ: ತಾಲೂಕಿನ ಹದ್ದಿನಾಳ ಗ್ರಾಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಭೇಟಿ ಹಿನ್ನೆಲೆಯಲ್ಲಿ ಶಿಷ್ಟಾಚಾರದಂತೆ ಆಗಮಿಸಿದ್ದ ದೇವದುರ್ಗ ಶಾಸಕಿ ಕರಿಯಮ್ಮ ಜಿ. ನಾಯಕ್ ಅವರನ್ನು ಭೂಮಾನಂದ ಅವರ ಕುಟುಂಬಸ್ಥರು ಭೇಟಿ ಮಾಡಿ ತಮ್ಮ ಅಸಮಾಧಾನ ವ್ಯಕ್ತಪಡಿಸಿದರು. ಭೂಮಾನಂದ ಅವರ ಹತ್ಯೆ ಬಳಿಕ ಶಾಸಕಿ ಗ್ರಾಮಕ್ಕೆ ಭೇಟಿ ನೀಡದಿರುವ ಬಗ್ಗೆ ಕುಟುಂಬಸ್ಥರು ಬೇಸರ ವ್ಯಕ್ತಪಡಿಸಿದಾಗ, ಶಾಸಕಿ ಅವರಿಗೆ ಸ್ಪಷ್ಟನೆ ನೀಡಿದರು.

ಪ್ರಕರಣದ ತನಿಖೆ ನಡೆಯುತ್ತಿದ್ದ ಸಂದರ್ಭದಲ್ಲಿ ನೇರವಾಗಿ ಗ್ರಾಮಕ್ಕೆ ಭೇಟಿ ನೀಡಲು ಸಾಧ್ಯವಾಗಿರಲಿಲ್ಲ. ಆದರೆ ಭೂಮಾನಂದ ಅವರ ಸಂಬಂಧಿಕರೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇನೆ. ಕುಟುಂಬದ ಪರಿಸ್ಥಿತಿ ಹಾಗೂ ಅವರ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರಲಾಗಿದೆ ಎಂದು ಶಾಸಕಿ ಕರಿಯಮ್ಮ ಜಿ. ನಾಯಕ್ ತಿಳಿಸಿದರು.

ಭೂಮಾನಂದ ಅವರ ಪತ್ನಿಗೆ ಸರ್ಕಾರಿ ಉದ್ಯೋಗ ನೀಡುವಂತೆ ಮುಖ್ಯಮಂತ್ರಿ ಅವರಿಗೆ ಈಗಾಗಲೇ ಪತ್ರ ಬರೆದಿದ್ದೇನೆ. ಕುಟುಂಬಕ್ಕೆ ನ್ಯಾಯ ದೊರೆಯುವವರೆಗೂ ಅವರೊಂದಿಗೆ ನಿಂತು ಸರ್ಕಾರದ ಮಟ್ಟದಲ್ಲಿ ಹೋರಾಟ ನಡೆಸುತ್ತೇನೆ. ಯಾವುದೇ ಕಾರಣಕ್ಕೂ ಕುಟುಂಬವನ್ನು ನಿರ್ಲಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಅವರು ಭರವಸೆ ನೀಡಿದರು.

ಹದ್ದಿನಾಳ ಗ್ರಾಮದ ಈ ಪ್ರಕರಣದಲ್ಲಿ ಭಾಗಿಯಾದ ತಪ್ಪಿತಸ್ಥರನ್ನು ಯಾವುದೇ ಕಾರಣಕ್ಕೂ ಬಿಡುವ ಪ್ರಶ್ನೆಯೇ ಇಲ್ಲ. ತನಿಖೆ ಸಂಪೂರ್ಣ ನಿಷ್ಪಕ್ಷಪಾತವಾಗಿ ನಡೆಯಬೇಕು. ಘಟನೆಯ ಹಿಂದೆ ಯಾರಿದ್ದಾರೆ, ಯಾರಿಂದ ಪ್ರಚೋದನೆ ದೊರೆತಿದೆ ಹಾಗೂ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾರ ಕೈವಾಡವಿದೆ ಎಂಬುದು ತನಿಖೆಯ ಮೂಲಕ ಹೊರಬರಬೇಕು ಎಂದು ಶಾಸಕಿ ಹೇಳಿದರು.

ಪ್ರಕರಣದಲ್ಲಿ ಯಾವುದೇ ಒತ್ತಡಕ್ಕೂ ಮಣಿಯದೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು. ತನಿಖೆ ಪೂರ್ಣಗೊಂಡ ಬಳಿಕ ಸತ್ಯಾಂಶ ಬಹಿರಂಗವಾಗಲಿದ್ದು, ತಪ್ಪಿತಸ್ಥರು ಯಾರೇ ಆಗಿದ್ದರೂ ಅವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂಬುದು ತಮ್ಮ ನಿಲುವಾಗಿದೆ ಎಂದು ಅವರು ತಿಳಿಸಿದರು.

ಭೂಮಾನಂದ ಅವರ ಕುಟುಂಬಕ್ಕೆ ಸರ್ಕಾರದಿಂದ ದೊರೆಯಬೇಕಾದ ಪರಿಹಾರ, ನೆರವು ಹಾಗೂ ಇತರೆ ಸೌಲಭ್ಯಗಳನ್ನು 2ನೇ ಪುಟಕ್ಕೆ

## ಶ್ರೀ ರಾಘವೇಂದ್ರ ಸ್ವಾಮಿಗಳ ಉತ್ತರಾರಾಧನೆ ವೈಭವ: ಮಹಾರಥೋತ್ಸವಕ್ಕೆ ಹೆಲಿಕಾಪ್ಟರ್‌ನಿಂದ ಪುಷ್ಪವೃಷ್ಟಿ







ಮಂತ್ರಾಲಯ: ಶ್ರೀ ರಾಘವೇಂದ್ರ ಸ್ವಾಮಿಗಳ ಪವಿತ್ರ ಉತ್ತರಾರಾಧನಾ ಮಹೋತ್ಸವವು ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಭಕ್ತಿ, ಶ್ರದ್ಧೆ, ವೈಭವ ಹಾಗೂ ಆಧ್ಯಾತ್ಮಿಕ ಸಂಭ್ರಮದೊಂದಿಗೆ ಅದ್ಧೂರಿಯಾಗಿ ನೆರವೇರಿತು.

ಶ್ರೀಮಠದ ಪರಂಪರೆಯಂತೆ ಉತ್ತರಾರಾಧನೆಯ ಅಂಗವಾಗಿ ಶ್ರೀ ಪ್ರಹ್ಲಾದರಾಜರ ಉತ್ಸವ ಮೂರ್ತಿಯನ್ನು ವಿಶೇಷ ಪೂಜೆಗಳೊಂದಿಗೆ ಮೆರವಣಿಗೆಯಲ್ಲಿ ಶ್ರೀ ಗುರುಸಾರ್ವಭೌಮ ವಿದ್ಯಾಪೀಠಕ್ಕೆ ಕೊಂಡೊಯ್ಯಲಾಯಿತು. ವೈದಿಕ ಮಂತ್ರಘೋಷ, ಮಂಗಳವಾದ್ಯ ಹಾಗೂ ಭಕ್ತರ ಜಯಘೋಷಗಳ ನಡುವೆ ನಡೆದ ಈ ಧಾರ್ಮಿಕ ಮೆರವಣಿಗೆ ಭಕ್ತರಲ್ಲಿ ವಿಶೇಷ ಭಕ್ತಿಭಾವ ಮೂಡಿಸಿತು.

ಶ್ರೀ ಗುರುಸಾರ್ವಭೌಮ ವಿದ್ಯಾಪೀಠದಲ್ಲಿ ಸಂಪ್ರದಾಯಬದ್ಧ ಧಾರ್ಮಿಕ ವಿಧಿವಿಧಾನಗಳು ನೆರವೇರಿದ ಬಳಿಕ ಶ್ರೀ ಪ್ರಹ್ಲಾದರಾಜರ ಉತ್ಸವ ಮೂರ್ತಿಯನ್ನು ಪುನಃ ಶ್ರೀಮಠಕ್ಕೆ ಕರೆತರಲಾಯಿತು. ನಂತರ ಶ್ರೀಮಠದ ಪುರಾತನ ಪರಂಪರೆಯಂತೆ ವಸಂತೋತ್ಸವವನ್ನು ಭಕ್ತಿ ಮತ್ತು ವೈಭವದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ವಿಶೇಷ ಪೂಜೆ, ಮಂಗಳಾರತಿ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆದವು.

ಶ್ರೀಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಶ್ರೀ ಪ್ರಹ್ಲಾದರಾಜರಿಗೆ ವಿಶೇಷ ಪೂಜೆ ಸಲ್ಲಿಸಿ, ಬಳಿಕ ಮಹಾರಥದ ಬಳಿಗೆ ಆಗಮಿಸಿದರು. ಅಲ್ಲಿ ಶಾಸ್ತ್ರೋಕ್ತ ವಿಧಿವಿಧಾನಗಳೊಂದಿಗೆ ಪವಿತ್ರ ರಥಾಂಗ ಪೂಜೆಯನ್ನು ನೆರವೇರಿಸಿದರು.

ರಥಾಂಗ ಪೂಜೆಯ ನಂತರ ಪರಮಪೂಜ್ಯ ಶ್ರೀಪಾದಂಗಳವರು ಶ್ರೀ ಪ್ರಹ್ಲಾದರಾಜರ ಭವ್ಯ ಮಹಾರಥೋತ್ಸವಕ್ಕೆ ವಿಧಿವತ್ತಾಗಿ ಚಾಲನೆ ನೀಡಿದರು. ವಿಶೇಷ ಪುಷ್ಪಾಲಂಕಾರ ಹಾಗೂ ಧಾರ್ಮಿಕ ಅಲಂಕಾರಗಳಿಂದ ಕಂಗೊಳಿಸಿದ್ದ ಮಹಾರಥದಲ್ಲಿ ಶ್ರೀ ಪ್ರಹ್ಲಾದರಾಜರ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ ಶ್ರೀಮಠದ ಆವರಣದಲ್ಲಿ ಭವ್ಯವಾಗಿ ರಥೋತ್ಸವ ನಡೆಸಲಾಯಿತು.

ಮಹಾರಥೋತ್ಸವ 2ನೇ ಪುಟಕ್ಕೆ

## ಕುಟುಂಬಕ್ಕೆ ಶೀಘ್ರ ನ್ಯಾಯ ಒದಗಿಸಲಾಗುವುದು: ಸಚಿವ ಡಾ.ಅಜಯ್ ಧರ್ಮಸಿಂಗ್



ರಾಯಚೂರು ಆಗಸ್ಟ್ 31 (ಕರ್ನಾಟಕ ವಾರ್ತೆ): ಜಿಲ್ಲೆಯ ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ಇತ್ತೀಚೆಗೆ ಮೃತ ಕು. ಅಶ್ವಿನಿ ಎಂಬುವವರನ್ನು ದುಷ್ಕರ್ಮಿಗಳು ಅತ್ಯಾಚಾರ ಮಾಡಿ ಕೊಲೆಗೈದ ಮೃತಳ ಮನೆಗೆ ಆಗಸ್ಟ್ 31ರ ಸೋಮವಾರ ದಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಅವರು ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿ ಧೈರ್ಯ ತುಂಬುವುದರ ಜೊತೆಗೆ ಅವರಿಗೆ ವೈಯಕ್ತಿಕ ಧನ ಸಹಾಯವನ್ನು ಮಾಡಿ ಕುಟುಂಬದವರಿದ ಮಾಹಿತಿ ಪಡೆದರು. ಮೃತ ಅಶ್ವಿನಿ ಸಹೋದರನಿಂದ ಮಾಹಿತಿ ಪಡೆದರು. ನಂತರ ಸಹೋದರಿ ಮಾತನಾಡಿ,ಗ್ರಾಮದಲ್ಲಿ ಮಹಿಳೆಯರಿಗೆ ಸರಿಯಾದ ಗೌರವವಿಲ್ಲ. ದೌರ್ಜನ್ಯಗಳು ಹೆಚ್ಚಾಗಿವೆ. ನಮ್ಮಂತವರಿಗೆ ಸೂಕ್ತ ಭದ್ರತೆ ಹಾಗೂ ಸ್ಥಾನಮಾನವನ್ನು ಒದಗಿಸಬೇಕು. ಅಲ್ಲದೆ ಗೌರವದಿಂದ ಜೀವನ ನಡೆಸಲು ಅನುಕೂಲ ಮಾಡಿಕೊಡಬೇಕೆಂದು ಸಚಿವರ ಮುಂದೆ ತಮ್ಮ ನೋವನ್ನು ಹೊರಹಾಕಿದರು.

ಪ್ರತಿಭಟನೆ ಸ್ಥಳಕ್ಕೆ ಸಚಿವರು ಭೇಟಿ: ಕುಮಾರಿ ಅಶ್ವಿನಿ ತಮ್ಮಾರೆಡ್ಡಿ, ಭೂಮಾನಂದ, ರಾಣಿಮ್ಮ ಅತ್ಯಾಚಾರ- ಕಗ್ಗೊಲೆ ದೌರ್ಜನ್ಯ ವಿರೋಧಿ ಸಂಘಟನೆಗಳ 2ನೇ ಪುಟಕ್ಕೆ

## ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಸೂಚನೆ



ರಾಯಚೂರು ಆಗಸ್ಟ್ 31 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಕಳೆದ ಒಂದು ತಿಂಗಳ ಅವಧಿಯಲ್ಲಿ ಈ ಘಟನೆಗಳು ನಡೆದಿದ್ದು. ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈ ಸಂಬಧ ಮಾನ್ಯ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರ ಗಮನಕ್ಕೆ ತರಲಾಗಿದ್ದು, ಸಂತ್ರಸ್ತ ನಿಯೋಗದೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಲಾಗಿದೆ. ಅಲ್ಲದೆ ಪ್ರಕರಣವನ್ನು ಕಟ್ಟುನಿಟ್ಟಾಗಿ ನಡೆಸಬೇಕು ಎಂದು ಜಿಲ್ಲಾಡಳಿತ ಹಾಗೂ ಪೊಲೀಸ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಅವರು ಹೇಳಿದರು.

ಆಗಸ್ಟ್ 31ರ ಸೋಮವಾರ ದಂದು ಜಿಲ್ಲೆಯ ಹೋಕ್ರಾಣಿ ಗ್ರಾಮದಲ್ಲಿ ಮೃತ ಕು. ಅಶ್ವಿನಿ ಅವರ ಮನೆಗೆ ಭೇಟಿ ನೀಡಿ ನಂತರ ಮಾಧ್ಯಮದವರೊಂದಿಗೆ ಮಾಹಿತಿ ನೀಡಿ ಮಾತನಾಡಿದರು.

ಘಟನೆಗೆ ಸಂಬಧಿಸಿದತೆ ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಕಟ್ಟು ನಿಟ್ಟಿನ ಸೂಚನೆ ನೀಡಲಾಗಿದೆ. ಮುಂಬರುವ ದಿನಗಳಲ್ಲಿ ಜಿಲ್ಲೆಯಲ್ಲಿ ಇಂತಹ ಯಾವುದೇ ಅಹಿತಕರ ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಲು ಮತ್ತು ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ವ್ಯಾಪಕ ಸಭೆಗಳನ್ನು ನಡೆಸಿ ಶಾಂತಿ-ಸುವ್ಯವಸ್ಥೆ ಕಾಪಾಡಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಕಾನೂನು 2ನೇ ಪುಟಕ್ಕೆ

## ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಲಿದೆ, ಸರ್ಕಾರ ಸದಾ ನಿಮ್ಮೊಂದಿಗಿದೆ: ಡಾ.ಅಜಯ್ ಧರ್ಮಸಿಂಗ್



ರಾಯಚೂರು ಆಗಸ್ಟ್ 31 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದ ಹದ್ದಿನಾಳ ಅವರನ್ನು ಇತ್ತೀಚೆಗೆ ಸುಂಕೇಶ್ವರಹಾಳ ಗ್ರಾಮದ ಬಳಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಲೆ ಮಾಡಿದ ಹಿನ್ನೆಲೆಯಲ್ಲಿ ಆಗಸ್ಟ್ 31ರ ಸೋಮವಾರ ದಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಹದ್ದಿನಾಳ ಗ್ರಾಮಕ್ಕೆ ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿದರು.

ಈ ವೇಳೆ ಸಚಿವರು ಮಾತನಾಡಿ, ಜಿಲ್ಲೆಯಲ್ಲಿ ನಡೆದಿರುವ ಈ ಅಹಿತಕರ ಕೃತ್ಯ ಮತ್ತು ಘಟನೆಯನ್ನು ಸರ್ಕಾರ ತೀವ್ರವಾಗಿ ಪರಿಗಣಿಸಿದ್ದು, ಈ ಪ್ರಕರಣದಲ್ಲಿ ಭಾಗಿಯಾದ ತಪ್ಪಿತಸ್ಥರನ್ನು ಯಾವುದೇ 2ನೇ ಪುಟಕ್ಕೆ

## ಕೊನೆಯ ಭಾಗದ ರೈತರಿಗೆ ಸಮರ್ಪಕವಾಗಿ ನೀರು ಹರಿಸಿ: ಡಾ.ಅಜಯ್ ಧರ್ಮಸಿಂಗ್



ರಾಯಚೂರು ಆಗಸ್ಟ್ 31(ಕರ್ನಾಟಕ ವಾರ್ತೆ): ತುಂಗಭದ್ರಾ ಎಡದಂಡೆ ಕಾಲುವೆಯ ಅಚ್ಚುಕಟ್ಟು ಪ್ರದೇಶದ ಕೊನೆಯ ಭಾಗದ ರೈತರಿಗೆ ಸಮರ್ಪಕವಾಗಿ ನೀರು ನಿರ್ವಹಣೆ ಮಾಡಬೇಕು. ಜಿಲ್ಲೆಯ ಬರಗಾಲ ಪೀಡಿತ ಪ್ರದೇಶಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್‌ಅವರು ಹೇಳಿದರು.

ಆಗಸ್ಟ್ 31ರ ಸೋಮವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಯಚೂರು ಜಿಲ್ಲೆಯಲ್ಲಿ ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆಗಳು, ಕೃಷಿ ಚಟುವಟಿಕೆಗಳು, ನೀರಾವರಿ ಸಮಸ್ಯೆಗಳು ಹಾಗೂ ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಐದು ತಾಲೂಕುಗಳನ್ನು ಬರ ಪೀಡಿತ ತಾಲೂಕು ಎಂದು ಘೋಷಣೆ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ತಾಲೂಕುಗಳನ್ನು ಬರ ಪೀಡಿತ ತಾಲೂಕು ಎಂದು ಘೋಷಿಸಲು ಕ್ರಮ ವಹಿಸಲಾಗುತ್ತದೆ ಎಂದರು.

ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು ಮುಂಜಾಗ್ರತಾ ವಹಿಸಿ, ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜನರಿಹೆ ತಲುಪಿಸಲು ಶ್ರಮಿಸಬೇಕು.

ಮುಖ್ಯಮಂತ್ರಿಯವರು ರಾಯಚೂರು ಜಿಲ್ಲೆಗೆ ವಿಶೇಷ ಆದ್ಯತೆ 2ನೇ ಪುಟಕ್ಕೆ

## ಎಸ್‌ಸಿಎಸ್‌ಟಿ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಿ: ಸುನೀಲ್ ಎಂ. ಉಕ್ಕಲಿ



ರಾಯಚೂರು: ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ. ಮೂರ್ತಿ ಎಲ್. ಅವರ ಅಧ್ಯಕ್ಷತೆಯಲ್ಲಿ ಆ.31ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿವಿಧ ಸಂಘಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ಸಭೆ ನಡೆಯಿತು.

ಸಭೆಯಲ್ಲಿ ಆಯೋಗದ ಸದಸ್ಯರಾದ ಸುನೀಲ್ ಎಂ. ಉಕ್ಕಲಿ, ಎನ್. ದಿವಾರ್ಕ್, ಗೀತಾ ಥಾಂವಶಿ ಹಾಗೂ ಆಯೋಗದ ಕಾರ್ಯದರ್ಶಿ ಡಾ. ಹೆಚ್.ಎಸ್. ಶಿವರಾಮು ಭಾಗವಹಿಸಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳಿಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳು, ದೂರುಗಳು ಹಾಗೂ ಬೇಡಿಕೆಗಳ ಕುರಿತು ಅಹವಾಲುಗಳನ್ನು ಸ್ವೀಕರಿಸಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಎಸ್‌ಸಿಎಸ್‌ಟಿ ಸಂಘಟನೆಗಳ ಪದಾಧಿಕಾರಿಗಳು ತಮ್ಮ ಸಮುದಾಯಗಳು ಎದುರಿಸುತ್ತಿರುವ ಸಮಸ್ಯೆಗಳು, ಸರ್ಕಾರಿ ಸೌಲಭ್ಯಗಳ ಅನುಷ್ಠಾನ, ಕಲ್ಯಾಣ ಕಾರ್ಯಕ್ರಮಗಳ ತಲುಪುವಿಕೆ ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಅಹವಾಲುಗಳನ್ನು 2ನೇ ಪುಟಕ್ಕೆ

## ಶಾಸಕ ಮಾನಪ್ಪ ವಜ್ಜಲ್ ವಿರುದ್ಧ ಡಿ.ಎಸ್. ಹೂಲಗೇರಿ ವಾಗ್ದಾಳಿ




ಲಿಂಗಸುಗೂರು, ಆ.31: ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಶಾಸಕ ಮಾನಪ್ಪ ವಜ್ಜಲ್ ಅವರು ಆಧಾರರಹಿತ ಆರೋಪಗಳನ್ನು ಮಾಡುತ್ತಿದ್ದಾರೆ. ಕ್ಷೇತ್ರದ ಅಭಿವೃದ್ಧಿಗಾಗಿ ಸರ್ಕಾರ ಪ್ರತಿವರ್ಷ ನೂರಾರು ಕೋಟಿ ರೂಪಾಯಿ ಅನುದಾನ ನೀಡುತ್ತಿದ್ದರೂ, ಅದನ್ನು ಸಮರ್ಪಕವಾಗಿ ಬಳಸಿಕೊಂಡು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಲ್ಲಿ ಶಾಸಕರು ವಿಫಲರಾಗಿದ್ದಾರೆ ಎಂದು ಮಾಜಿ ಶಾಸಕ ಹಾಗೂ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಡಿ.ಎಸ್. ಹೂಲಗೇರಿ ಆರೋಪಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ನಡೆಯುತ್ತಿರುವ ಕಳಪೆ ಕಾಮಗಾರಿಗಳಿಗೆ ಶಾಸಕರು ಬೆಂಬಲ ನೀಡುತ್ತಿದ್ದಾರೆ ಎಂದು ದೂರಿದರು. ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಕಟ್ಟಡ ಕಾಮಗಾರಿ ಪೂರ್ಣಗೊಂಡು ಹಲವು ವರ್ಷ ಕಳೆದಿದ್ದರೂ ಅದನ್ನು ಉದ್ಘಾಟಿಸದಿರುವುದಕ್ಕೆ ಶಾಸಕರೇ ಕಾರಣ ಎಂದು ಆರೋಪಿಸಿದರು.

ಮಾಜಿ ಸಚಿವ ನಾಗೇಂದ್ರ ಅವರ ವಿರುದ್ಧ ಬಿಜೆಪಿ ರಾಜಕೀಯ ಪಿತೂರಿ ನಡೆಸುತ್ತಿದೆ ಎಂದು ಆರೋಪಿಸಿದ 2ನೇ ಪುಟಕ್ಕೆ

# ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಂದ ವಸತಿ ನಿಲಯಕ್ಕೆ ಅರ್ಜಿ ಆಹ್ವಾನ

ರಾಯಚೂರು ಆಗಸ್ಟ್ 31 (ಕರ್ನಾಟಕ ವಾರ್ತೆ): ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ ಮತ್ತು ಪ.ವರ್ಗದ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2026-27ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯವು ಪ್ರವರ್ಗ-1, ಎಸ್.ಸಿ ಎಸ್.ಟಿ ರೂ. 2.50 ಲಕ್ಷ ಹಾಗೂ ಪ್ರವರ್ಗ- 2ಎ, 2ಬಿ, 3ಎ, 3ಬಿ ರೂ. 1.00 ಲಕ್ಷ ಮಿತಿ ಒಳಗಿರಬೇಕು.

ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್‌ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30-09-2026ರ ತಾಲ್ಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ವಿಳಾಸ: https://bcwd.karnataka.gov.in ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770004ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆಪ್ಟಂಬರ್ 04ರಂದು ನೇರ ಪ್ರದರ್ಶನ ಕಾರ್ಯಕ್ರಮ

ರಾಯಚೂರು ಆಗಸ್ಟ್ 31 (ಕರ್ನಾಟಕ ವಾರ್ತೆ): ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ರಾಯಚೂರು ಹಾಗೂ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಗೂ ಸೆಲ್ಕೋ ಫೌಂಡೇಶನ್, ಬೆಂಗಳೂರು ಇವರ ಸಂಯುಕ್ತಾಶ್ರದಲ್ಲಿ ಸ್ವಾವಲಂಬಿ ಬದುಕಿನತ್ತ-ವಿಕಲಚೇತನರಿಗಾಗಿ ಜೀವನೋಪಾಯ ತಂತ್ರಜ್ಞಾನಗಳ ನೇರ ಪ್ರದರ್ಶನವನ್ನು ಸೆಪ್ಟಂಬರ್ 04ರ ಬೆಳಿಗ್ಗೆ 9.30ಕ್ಕೆ ರಾಯಚೂರಿನ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮದಿರದಲ್ಲಿ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ಅರ್ಹ ವಿಕಲಚೇತನರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ

ರಾಯಚೂರು: ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಶ್ರೀ ಪಾಮಯ್ಯ ಮುರಾರಿ ಅವರ ಅಧ್ಯಕ್ಷತೆಯಲ್ಲಿ ಇಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿ ಸಭೆ ನಡೆಯಲಿದೆ ಎಂದು ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಸಂಬಂಧಿತ ಕಾರ್ಯವಿಧಾನಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಉದ್ದೇಶದಿಂದ ರಚಿಸಲಾದ ಜಿಲ್ಲಾ ಮಟ್ಟದ ಅನುಷ್ಠಾನ ಪ್ರಾಧಿಕಾರ ಸಮಿತಿಯ ಸಭೆಯನ್ನು ರಾಯಚೂರು ಜಿಲ್ಲಾ ಪಂಚಾಯತ್‌ನ ಜಲ ನಿರ್ಮಲ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಉಪಾಧ್ಯಕ್ಷರು, ಸರ್ವ ಸದಸ್ಯರು ಹಾಗೂ ಸಂಬಂಧಿತ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗುವಂತೆ ಸೂಚಿಸಲಾಗಿದೆ.

ಇದಲ್ಲದೆ, ಸಂಬಂಧಿತ ಇಲಾಖೆಗಳು ತಮ್ಮ ವ್ಯಾಪ್ತಿಯ ಕಾರ್ಯಕ್ರಮಗಳು ಹಾಗೂ ಯೋಜನೆಗಳಡಿ ಈವರೆಗೆ ಸಾಧಿಸಿರುವ ಪ್ರಗತಿ ವರದಿಯನ್ನು ಮಾಹೆವಾರು ವಿವರಗಳೊಂದಿಗೆ ಹಾರ್ಡ್ ಕಾಪಿ ಮತ್ತು ಸಾಫ್ಟ್ ಕಾಪಿ ರೂಪದಲ್ಲಿ, ಎ-4 ಲ್ಯಾಂಡ್‌ಸ್ಕೇಪ್ ಮಾದರಿಯಲ್ಲಿ ಸಿದ್ಧಪಡಿಸಿ ಈಗಾಗಲೇ ನಿಗದಿಪಡಿಸಿದ ದಿನಾಂಕದೊಳಗೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಸಲ್ಲಿಸುವಂತೆ ತಿಳಿಸಲಾಗಿದೆ.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ, ಇಲಾಖಾವಾರು ಸಾಧನೆ ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ಚರ್ಚೆ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಅಮೃತ ವಾಣಿ

**ಅರಿಯದವರ ಮಾತಿಗೆ ಮರುಳಾಗಬೇಡ ನಿನ್ನನ್ನು ಲೆಕ್ಕಿಸದವರ ಹಿಂದೆ ಹೋಗಬೇಡ.**

## 1572 ನೇಯ ದಿನಕ್ಕೆ ಏಮ್ಸ್ ಹೋರಾಟ

अखिल भारतीय आयुर्विज्ञान संस्थान ALL INDIA INSTITUTE OF MEDICAL SCIENCES शरीरमाद्यं खलु धर्मसाधनम्

# ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಸೂಚನೆ

ಮತ್ತು ಸುವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಅಗತ್ಯವಿರುವ ಹೆಚ್ಚುವರಿ ಪೊಲೀಸ್ ಸಿಬ್ಬಂದಿ ಹಾಗೂ ಮೂಲಸೌಕರ್ಯಗಳನ್ನು ಒದಗಿಸುವಂತೆ ಗೃಹ ಸಚಿವರಿಗೆ ತಿಳಿಸಲಾಗಿದೆ, ಕಲ್ಯಾಣ ಕರ್ನಾಟಕ ಭಾಗದ ಪ್ರತಿಯೊಂದು ಜಿಲ್ಲೆಯಲ್ಲೂ ಹಾಗೂ ವಿಶೇಷವಾಗಿ ರಾಯಚೂರು ಜಿಲ್ಲೆಗೆ ಹೆಚ್ಚಿನ ಆದ್ಯತೆ ನೀಡಿ, ಶೌಚಾಲಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಪೂರ್ಣ ಪ್ರಮಾಣದಲ್ಲಿ ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸಂಸದರಾದ ಜಿ.ಕುಮಾರ ನಾಯಕ, ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ಮಾನ್ವಿ ಶಾಸಕರಾದ ಹಂಪಯ್ಯ ನಾಯಕ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಸಿರವಾರ ತಹಶಿಲ್ದಾರ್ ಚಂದ್ರಶೇಖರ ಪವಾರ್, ವಿವಿಧ ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಲಿದೆ, ಸರ್ಕಾರ ಸದಾ ನಿಮ್ಮೊಂದಿಗಿದೆ: ಡಾ.ಅಜಯ್ ಧರ್ಮಸಿಂಗ್

ಕಾರಣಕ್ಕೂ ಬಿಡುವ ಪ್ರಶ್ನೆಯೇ ಇಲ್ಲ. ಈ ವಿಷಯವನ್ನು ಈಗಾಗಲೇ ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಸುದೀರ್ಘ ಚರ್ಚೆ ನಡೆಸಿದ್ದೇವೆ. ಈ ಸಭೆಯಲ್ಲಿ ಉಪಮುಖ್ಯಮಂತ್ರಿಗಳು ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಅವರೂ ಕೂಡ ಉಪಸ್ಥಿತರಿದ್ದು, ಘಟನೆಯ ವಿವರಗಳನ್ನು ಕಲೆಹಾಕಲಾಗಿದೆ ಎಂದರು.

ಎಟು ಜನರ ಬಂಧನ: ಘಟನೆ ನಡೆದ ತಕ್ಷಣವೇ ಸಕ್ರಿಯವಾಗಿರುವ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮಾತುಕತೆ ನಡೆಸಲಾಗಿದ್ದು, ಪ್ರಕರಣಕ್ಕೆ ಸಂಬಧಿಸಿದತೆ ಈಗಾಗಲೇ ಎಂಟು ಜನರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ ಎಂದರು.

ನಿಷ್ಪಕ್ಷಪಾತ ತನಿಖೆ: ಘಟನೆಯ ಹಿಂದೆ ಯಾರಿದ್ದಾರೆ, ಪ್ರಚೋದನೆ ನೀಡಿದವರು ಯಾರು ಮತ್ತು ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾರ ಕೈವಾಡವೇ ಇದ್ದರೂ ತನಿಖೆಯ ನಂತರ ಎಲ್ಲಾ ಸತ್ಯ ಬೆಳಕಿಗೆ ಬರಲಿದೆ. ನಮ್ಮ ಸರ್ಕಾರ ಸಂತ್ರಸ್ತರು ಮತ್ತು ಸಾರ್ವಜನಿಕರ ಜೊತೆಗಿದೆ. ಸ್ವತಃ ಮಾನ್ಯ ಮುಖ್ಯಮಂತ್ರಿಗಳನ್ನು ಭೇಟಿಯಾಗಿ, ರಾಯಚೂರಿಗೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸುವುದಾಗಿ ತಿಳಿಸಿ ಬಂದಿದ್ದೇವೆ. ಸಂತ್ರಸ್ತರಿಗೆ ಸೂಕ್ತ ನ್ಯಾಯ ದೊರಕಿಸಿಕೊಡುವುದು ನಮ್ಮ ಆದ್ಯತೆಯಾಗಿದೆ ಎಂದರು.

ದೇವದುರ್ಗ ಶಾಸಕಿ ಕರಿಯಮ್ಮ ಜಿ.ನಾಯಕ ಮಾತನಾಡಿ, ಸಂತ್ರಸ್ತರ ತಾಯಿ ಮತ್ತು ನಮ್ಮ ತಾಯಂದಿರು ಒಂದೇ ಊರಿನ ತವರು ಮನೆಯವರಾಗಿದ್ದು, ನಮಗೂ ಈ ಕುಟುಂಬಕ್ಕೂ ಹತ್ತಿರದ ಒಡನಾಟವಿದೆ. ನಿಮ್ಮ ಈ ಅಪಾರ ದುಃಖದಲ್ಲಿ ನಾನು ಕೂಡ ಭಾಗಿಯಾಗಿದ್ದೇನೆ ಎಂದರು.

ಈ ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ದರೂ, ಎಷ್ಟೇ ಪ್ರಭಾವಿಯಾಗಿದ್ದರೂ ಯಾವುದೇ ರೀತಿಯ ಹಸ್ತಕ್ಷೇಪ ಮಾಡುವುದಿಲ್ಲ. ತಪ್ಪಿತಸ್ಥರು ಯಾರೇ ಇರಲಿ, ಅವರಿಗೆ ಕಾನೂನು ಪ್ರಕಾರ ಕಠಿಣ ಶಿಕ್ಷೆಯಾಗಲೇಬೇಕು.

ಬೇರೆಡೆ ಇಂತಹ ಘಟನೆಗಳು ನಡೆದ ತಕ್ಷಣವೇ ಸರ್ಕಾರ ಸ್ಪಂದಿಸಿ ಪರಿಹಾರ ನೀಡುವಂತೆ, ನಮ್ಮ ಕ್ಷೇತ್ರದಲ್ಲಿ ಇತ್ತೀಚೆಗೆ ಮೃತಪಟ್ಟ ಪರಿಶಿಷ್ಟ ಜಾತಿ ಸಮುದಾಯದ ಯುವಕರ ಕುಟುಂಬಗಳಿಗೂ ಹಾಗೂ ಈ ಕುಟುಂಬಕ್ಕೂ ಸೂಕ್ತ ಪರಿಹಾರ ತಕ್ಷಣವೇ ಸಿಗಬೇಕು ಎಂದರು.

ನಾನು ಶಬರಿಮಲೆಯಲ್ಲಿದ್ದರೂ ಹಾಗೂ ಬೆಂಗಳೂರಿನಲ್ಲಿದ್ದರೂ ವಿಷಯ ತಿಳಿದ ತಕ್ಷಣವೇ ದೇವಸ್ಥಾನದ ಪೂಜೆಯನ್ನೂ ಬದಿಗೊತ್ತಿ ಸ್ಥಳಕ್ಕೆ ಧಾವಿಸಿ ಬಂದಿದ್ದೇನೆ. ಕ್ಷೇತ್ರದ ಮಗಳಾಗಿ ನಿಮ್ಮೆಲ್ಲರ ಜೊತೆ ನಿಲ್ಲುವುದು ನನ್ನ ಕರ್ತವ್ಯ ಎಂದರು.

ಈ ವೇಳೆ ದೇವದುರ್ಗ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರಾಜಕುಮಾರ್ ಅವರು ಮಾತನಾಡಿ, ಸಂತ್ರಸ್ತ ಕುಟುಂಬಕ್ಕೆ ಸರ್ಕಾರದ ವತಿಯಿಂದ ಒಟ್ಟು 8,25,000ರೂ.ಪರಿಹಾರ ಧನ ನಿಗದಿಯಾಗಿದ್ದು, ಅದರಲ್ಲಿ ಮೊದಲ ಕಂತಿನ ಭಾಗವಾಗಿ 4,12,500ರೂ. ಪರಿಹಾರದ ಮೊತ್ತವನ್ನು ಅವರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. ಅಲ್ಲದೆ ನ್ಯಾಯಾಲಯಕ್ಕೆ ಚಾರ್ಜ್ಶೀಟ್ ಸಲ್ಲಿಕೆಯಾದ ತಕ್ಷಣವೇ ಬಾಕಿ ಇರುವ 4,12,500 ಪರಿಹಾರ ಮೊತ್ತವನ್ನು ಕೂಡಲೇ ಬಿಡುಗಡೆ ಮಾಡಲಾಗುವುದು ಎಂದರು.

ಇತ್ತೀಚೆಗೆ ಸಂತ್ರಸ್ತರ ಮನೆಗೆ ಅಧಿಕಾರಿಗಳು ನಾಲ್ಕು ಬಾರಿ ಭೇಟಿ ನೀಡಿ ಪರೀಶೀಲನೆ ನಡೆಸಿದ್ದು, ರೇಷನ್ ಸೇರಿದಂತೆ ಇತರೆ ಅಗತ್ಯ ನೆರವು ಒದಗಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸಂಸದರಾದ ಜಿ.ಕುಮಾರ ನಾಯಕ, ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ಮಾನ್ವಿ ಶಾಸಕರಾದ ಹಂಪಯ್ಯ ನಾಯಕ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಲಿಂಗಸುಗೂರು ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್, ದೇವದುರ್ಗ ತಹಶಿಲ್ದಾರ್ ನಾಗಮ್ಮ ಕಟ್ಟಿಮನಿ, ದೇವದುರ್ಗ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರಾಜಕುಮಾರ ಸೇರಿದಂತೆ ಭೂಮಾನಂದ ಕುಟುಂಬಸ್ಥರು. ಹದ್ದಿನಾಳ ಗ್ರಾಮಸ್ಥರು ಹಾಗೂ ವಿವಿಧ ಸಂಘಟನೆಯ ಮುಖಂಡರು ಇದ್ದರು.

# ಕೊನೆಯ ಭಾಗದ ರೈತರಿಗೆ ಸಮರ್ಪಕವಾಗಿ ನೀರು ಹರಿಸಿ: ಡಾ.ಅಜಯ್ ಧರ್ಮಸಿಂಗ್

ನೀಡಿದ್ದು, ಸರ್ಕಾರದ ಮಹತ್ವಾಕಾಂಕ್ಷಿ ಪ್ರಜಾಸೇವೆ ಕಾರ್ಯಕ್ರಮವನ್ನು ರಾಯಚೂರಿನಿಂದಲೇ ಪ್ರಾರಂಭಿಸಲು ನಿರ್ಧರಿಸಲಿದ್ದಾರೆ. ಮಾತ್ರವಲ್ಲದೆ, ಬರಗಾಲ ವೀಕ್ಷಣೆ ಪ್ರವಾಸವನ್ನು ಸಹ ಈ ಭಾಗದಿಂದಲೇ ಕೈಗೊಳ್ಳಲು ತೀರ್ಮಾನಿಸಿದ್ದಾರೆ ಎಂದರು.

ರಾಜಕೀಯ ಪಕ್ಷಗಳು ತಮ್ಮ ಚಟುವಟಿಕೆಗಳನ್ನು ಇಲ್ಲಿಂದಲೇ ಆರಂಭಿಸುತ್ತಿರುವುದನ್ನು ಗಮನದಲ್ಲಿಟ್ಟುಕೊಂಡು, ಜಿಲ್ಲೆಯ ಪ್ರತಿಯೊಂದು ಬೆಳವಣಿಗೆ ಹಾಗೂ ಕಾರ್ಯವೈಖರಿಯನ್ನು ನಿರಂತರವಾಗಿ ಮೇಲ್ವಿಚಾರಣೆ

ಮಾಡಬೇಕು. ತಾಲೂಕು ಮಟ್ಟದಲ್ಲಿ 'ಪ್ರಜಾಸೇವೆ' ಕಾರ್ಯಕ್ರಮಗಳು ನಡೆಯಲಿವೆ. ಈಗಾಗಲೇ ಹಲವು ಬಾರಿ ಜಿಲ್ಲೆಗೆ ಭೇಟಿ ನೀಡಲಾಗಿದ್ದು, ಮುಂಬರುವ ಶುಕ್ರವಾರ ಮತ್ತು ಶನಿವಾರದಂದು ಮತ್ತೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು. ಅಧಿಕಾರಿಗಳ ಕಾರ್ಯವೈಖರಿಯನ್ನು ಹತ್ತಿರದಿಂದ ಗಮನಿಸಲಾಗುತ್ತಿದ್ದು, ಪ್ರತಿಯೊಬ್ಬ ಅಧಿಕಾರಿಗಳು ಮತ್ತು ಸಿಬ್ಬಂದಿ ಅತ್ಯಂತ ಜವಾಬ್ದಾರಿಯಿಂದ ಸಾರ್ವಜನಿಕರ ಕೆಲಸಗಳನ್ನು ನಿರ್ವಹಿಸಬೇಕು ಸಚಿವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಜಿಲ್ಲಾಧಿಕಾರಿ ಪೂವಿತಾ ಎಸ್. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಬಸವಣ್ಣೆಪ್ಪ ಕಲಶೆಟ್ಟಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲ ಸಿದ್ದಪ್ಪ ಪೂಜಾರಿ, ಲೆಕ್ಕಾಧಿಕಾರಿ ವಿಜಯಶಂಕರ್, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ತಿಮ್ಮಪ್ಪ ಬಿರಾದಾರ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ತಹಶಿಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

# ಎಸ್‌ಸಿಎಸ್‌ಟಿ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಿ: ಸುನೀಲ್ ಎಂ. ಉಕ್ಕಲಿ

ಆಯೋಗದ ಮುಂದೆ ಮಂಡಿಸಿದರು.

ಸಂಘಸಂಸ್ಥೆಗಳ ಪ್ರತಿನಿಧಿಗಳು ನೀಡಿದ ಮನವಿಗಳನ್ನು ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರು ಆಲಿಸಿ, ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರಿಗೆ ಸರ್ಕಾರದಿಂದ ದೊರೆಯಬೇಕಾದ ಸೌಲಭ್ಯಗಳು ಸಮರ್ಪಕವಾಗಿ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂಬ ಆಶಯ ಸಭೆಯಲ್ಲಿ ವ್ಯಕ್ತವಾಯಿತು.

ಸಮುದಾಯದ ಜನರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸಂಬಂಧಿಸಿದ ಅಹವಾಲುಗಳನ್ನು ವಿಳಂಬ ಮಾಡದೆ ಪರಿಶೀಲಿಸಿ, ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವ ಅಗತ್ಯವಿದೆ. ವಿವಿಧ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳು ಹಾಗೂ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಹೆಚ್ಚಿನ ಆದ್ಯತೆ ನೀಡಬೇಕು ಎಂಬುದರ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೋಹಪಾತ್ರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೃಷ್ಣ ಶಾವಂತಗೇರಾ ಸೇರಿದಂತೆ ವಿವಿಧ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಇದೇ ವೇಳೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ವಿವಿಧ ಸಂಘಸಂಸ್ಥೆಗಳ ಪದಾಧಿಕಾರಿಗಳು, ಪ್ರತಿನಿಧಿಗಳು ಹಾಗೂ ಇತರರು ಸಭೆಯಲ್ಲಿ ಭಾಗವಹಿಸಿ ತಮ್ಮ ಅಹವಾಲುಗಳನ್ನು ಆಯೋಗದ ಗಮನಕ್ಕೆ ತಂದರು.

# ಶಾಸಕ ಮಾನಪ್ಪ ವಜ್ಜಲ್ ವಿರುದ್ಧ ಡಿ.ಎಸ್. ಹೂಲಗೇರಿ ವಾಗ್ದಾಳಿ

ಹೂಲಗೇರಿ, ಪಕ್ಷಕ್ಕೆ ಮುಜುಗರವಾಗಬಾರದು ಎಂಬ ಕಾರಣದಿಂದ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಎಸ್‌ಟಿ ಸಮುದಾಯಕ್ಕೆ ಸೇರಿದ ನಾಗೇಂದ್ರ ಅವರನ್ನು ಗುರಿಯಾಗಿಸಿಕೊಂಡು ಬಿಜೆಪಿ ಪಾದಯಾತ್ರೆ ನಡೆಸುತ್ತಿರುವುದು ರಾಜಕೀಯ ನಾಟಕವಾಗಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿನ ಬರಗಾಲ ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ವಿಧಾನಮಂಡಲ ಅಧಿವೇಶನದಲ್ಲಿ ಸಮಗ್ರ ಚರ್ಚೆಗೆ ಅವಕಾಶ ನೀಡದೆ, ಸದನದ ಕಲಾಪಕ್ಕೆ ಅಡ್ಡಿಪಡಿಸಲಾಗಿದೆ ಎಂದು ಅವರು ಆರೋಪಿಸಿದರು. ರಾಯಚೂರು ಜಿಲ್ಲೆಗೆ ಏಮ್ಸ್ ಮಂಜೂರು ಮಾಡಬೇಕೆಂದು ಜಿಲ್ಲೆಯ ಜನರು ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿದ್ದರೂ ಕೇಂದ್ರ ಸರ್ಕಾರ ಈ ಬೇಡಿಕೆಗೆ ಸ್ಪಂದಿಸಿಲ್ಲ. ಇಂತಹ ಸಂದರ್ಭದಲ್ಲಿ ಲಿಂಗಸುಗೂರಿನಿಂದ ಬಳ್ಳಾರಿವರೆಗೆ ಪಾದಯಾತ್ರೆ ನಡೆಸುತ್ತಿರುವುದು ಹಾಸ್ಯಾಸ್ಪದವಾಗಿದೆ ಎಂದರು.

ಕಾಂಗ್ರೆಸ್ ವಿರುದ್ಧ ಆರೋಪ ಮಾಡುವ ಮೊದಲು ಬಿಜೆಪಿ ತನ್ನ ಆಡಳಿತಾವಧಿಯ ನಡೆ-ನುಡಿಗಳನ್ನು ಅವಲೋಕಿಸಿಕೊಳ್ಳಬೇಕು. ನ್ಯಾಯಕ್ಕಾಗಿ ಹೋರಾಟ ನಡೆಸಿದ ವಿದ್ಯಾರ್ಥಿಗಳ ವಿರುದ್ಧ ಕಠಿಣ ಕ್ರಮ ಕೈಗೊಂಡ ಕೇಂದ್ರ ಸರ್ಕಾರದಿಂದ ಯುವಜನರ ಭವಿಷ್ಯ ಸುಧಾರಣೆ ಸಾಧ್ಯವೇ ಎಂದು ಹೂಲಗೇರಿ ಪ್ರಶ್ನಿಸಿದರು.

ಸುದ್ದಿಗೋಷ್ಠಿಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಹ್ಮದ್ ಬಾಬಾ, ಕಾಂಗ್ರೆಸ್ ಮುಖಂಡರಾದ ಡಾ. ಶಿವಬಸಪ್ಪ ಹೆಸೂರು, ಪಂಚ ಗ್ಯಾರಂಟಿ ತಾಲೂಕು ಅಧ್ಯಕ್ಷ ವೆಂಕಟೇಶ ಗುತ್ತೇದಾರ, ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸೂರು, ಉಮೇಶ ಹುಣಕುಂಟಿ, ಪ್ರಭುಸ್ವಾಮಿ ಅತ್ತನೂರು, ಸಿದ್ದನಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಮೊದಲ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಶೇ.7.8ರಷ್ಟು ಬೆಳವಣಿಗೆ

ಶೇ.7.8ರಷ್ಟು ಜಿಡಿಪಿ ಬೆಳವಣಿಗೆ ಸಾಧಿಸಿರುವುದನ್ನು ಪ್ರಧಾನಿ ನರೇಂದ್ರ ಮೋದಿ ಗಮನಾರ್ಹ ಸಾಧನೆ ಎಂದು ಬಣ್ಣಿಸಿದ್ದಾರೆ. ಜಾಗತಿಕ ಅನಿಶ್ಚಿತತೆ, ತೈಲ ಬೆಲೆಗಳ ಏರಿಳಿತ ಹಾಗೂ ಪೂರೈಕೆ ಸರಪಳಿ ಅಡಚಣೆಗಳ ನಡುವೆಯೂ ದೇಶದ ಜನರ ಸಾಮೂಹಿಕ ಶಕ್ತಿಯಿಂದ ಭಾರತ ಉತ್ತಮ ಬೆಳವಣಿಗೆ ಸಾಧಿಸಿದೆ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ್ದಾರೆ.

ನಿರಾಶಾವಾದಿಗಳ ಅಂದಾಜುಗಳನ್ನು ಮೀರಿ ಭಾರತ ಮತ್ತೊಮ್ಮೆ ಆರ್ಥಿಕ ಸಾಧನೆಯ ಹೊಸ ಎತ್ತರ ತಲುಪಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಇದೇ ವೇಳೆ, ಒಟ್ಟು ಮೌಲ್ಯವರ್ಧಿತ (ಜಿವಿಎ) ಬೆಳವಣಿಗೆಯೂ ಉತ್ತಮವಾಗಿದೆ. 2026-27ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಮೂಲ ಬೆಲೆಗಳಲ್ಲಿ ನೈಜ ಜಿವಿಎ ಶೇ.8.2ರಷ್ಟು ಏರಿಕೆಯಾಗಿ 73.82 ಲಕ್ಷ ಕೋಟಿ ರೂ.ಗೆ ತಲುಪಿದೆ. ಕಳೆದ ವರ್ಷದ ಇದೇ ಅವಧಿಯಲ್ಲಿ ಇದು 68.21 ಲಕ್ಷ ಕೋಟಿ ರೂ. ಆಗಿತ್ತು. ನಾಮಮಾತ್ರ ಜಿವಿಎ ಶೇ.11.5ರಷ್ಟು ಹೆಚ್ಚಾಗಿ 80.53 ಲಕ್ಷ ಕೋಟಿ ರೂ.ಗೆ ತಲುಪಿದೆ.

ಹೆಚ್ಚಿನ ಇಂಧನ ವೆಚ್ಚಗಳು ಮತ್ತು ಭೌಗೋಳಿಕ ರಾಜಕೀಯ ಉದ್ವಿಗ್ನತೆ ಉತ್ಪಾದನಾ ಚಟುವಟಿಕೆಯ ಮೇಲೆ ಪರಿಣಾಮ ಬೀರುವ ಆತಂಕಗಳ ನಡುವೆಯೂ ದೇಶೀಯ ಆರ್ಥಿಕ ಚಟುವಟಿಕೆ ನಿರೀಕ್ಷೆಗಿಂತ ಬಲವಾಗಿ ಉಳಿದಿದೆ ಎಂಬುದನ್ನು ಹೊಸ ದತ್ತಾಂಶ ತೋರಿಸುತ್ತದೆ.

ಮೊದಲ ತ್ರೈಮಾಸಿಕದ ಈ ಅಂಕಿಅಂಶಗಳು 2022-23ನೇ ಸಾಲನ್ನು ಮೂಲ ವರ್ಷವನ್ನಾಗಿ ಪರಿಗಣಿಸಿರುವ ಭಾರತದ ಹೊಸ ರಾಷ್ಟ್ರೀಯ ಖಾತೆಗಳ ಸರಣಿಯ ಭಾಗವಾಗಿವೆ. MoSPI ಫೆಬ್ರವರಿ 2026ರಲ್ಲಿ ಹೊಸ ವಾರ್ಷಿಕ ಮತ್ತು ತ್ರೈಮಾಸಿಕ ಜಿಡಿಪಿ ಸರಣಿಯನ್ನು ಬಿಡುಗಡೆ ಮಾಡಿತ್ತು. ನವೀಕರಿಸಿದ ಅಂದಾಜುಗಳಲ್ಲಿ ಹೊಸ ಉತ್ಪಾದಕ ಬೆಲೆ ಸೂಚ್ಯಂಕ, ಪರಿಷ್ಕೃತ ಕೈಗಾರಿಕಾ ಉತ್ಪಾದನಾ ಸೂಚ್ಯಂಕ ಹಾಗೂ ಆಡಳಿತಾತ್ಮಕ ದತ್ತಾಂಶ ಸೇರಿದಂತೆ ಪರಿಷ್ಕೃತ ವಿಧಾನಗಳನ್ನು ಅಳವಡಿಸಲಾಗಿದೆ.

ಇನ್ನೊಂದೆಡೆ, ಅಮೆರಿಕಾ-ಇರಾನ್ ಸಂಘರ್ಷದಿಂದ ಜಾಗತಿಕ ಕಚ್ಚಾ ತೈಲ ಬೆಲೆ ಏರಿಕೆಯಾಗಿದ್ದು, ರೂಪಾಯಿ ಮೇಲೆಯೂ ಒತ್ತಡ ಕಂಡುಬಂದಿದೆ. ಬ್ರೆಂಟ್ ಕಚ್ಚಾ ತೈಲ ಬೆಲೆ ಬ್ಯಾರೆಲ್‌ಗೆ 90 ಡಾಲರ್ ಗಿಂತ ಮೇಲೇರಿದ ಸಂದರ್ಭದಲ್ಲಿ ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಮಧ್ಯಪ್ರವೇಶಿಸಿದೆ ಎಂದು ವರದಿಯಾಗಿದೆ.

# ಶ್ರೀ ರಾಘವೇಂದ್ರ ಸ್ವಾಮಿಗಳ ಉತ್ತರಾರಾಧನೆ ವೈಭವ: ಮಹಾರಥೋತ್ಸವಕ್ಕೆ ಹೆಲಿಕಾಪ್ಟರ್‌ನಿಂದ ಪುಷ್ಪವೃಷ್ಟಿ

ಆರಂಭವಾಗುತ್ತಿದ್ದಂತೆ ಸಾವಿರಾರು ಭಕ್ತರು "ಶ್ರೀ ಗುರು ರಾಘವೇಂದ್ರ", "ಜಯ ಗುರುರಾಯ" ಎಂಬ ಜಯಘೋಷಗಳನ್ನು ಮೊಳಗಿಸುತ್ತಾ ರಥದ ದರ್ಶನ ಪಡೆದು ಭಕ್ತಿ ಸಮರ್ಪಿಸಿದರು. ವೇದಮಂತ್ರಗಳ ಪಠಣ, ಮಂಗಳವಾದ್ಯಗಳ ನಾದ ಹಾಗೂ ಭಕ್ತರ ನಾಮಸ್ಮರಣೆಯಿಂದ ಮಂತ್ರಾಲಯ ಕ್ಷೇತ್ರ ಸಂಪೂರ್ಣ ಭಕ್ತಿಮಯ ವಾತಾವರಣದಲ್ಲಿ ಮುಳುಗಿತ್ತು.

ಮಹಾರಥೋತ್ಸವದ ವಿಶೇಷ ಆಕರ್ಷಣೆಯಾಗಿ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಹೆಲಿಕಾಪ್ಟರ್ ಮೂಲಕ ಭವ್ಯ ಮಹಾರಥದ ಮೇಲೆ ಪುಷ್ಪವೃಷ್ಟಿ ನೆರವೇರಿಸಿದರು. ಆಕಾಶದಿಂದ ಮಹಾರಥದ ಮೇಲೆ ಸುರಿದ ಪುಷ್ಪಗಳು ಭಕ್ತರ ಗಮನ ಸೆಳೆದಿದ್ದು, ರಥೋತ್ಸವಕ್ಕೆ ಮತ್ತಷ್ಟು ದೈವಿಕ ಹಾಗೂ ವೈಭವಯುತ ಮೆರುಗು ತಂದವು.

ಹೆಲಿಕಾಪ್ಟರ್‌ನಿಂದ ನಡೆದ ಪುಷ್ಪವೃಷ್ಟಿಯನ್ನು ಕಣ್ತುಂಬಿಕೊಳ್ಳಲು ಭಕ್ತರು ಅಪಾರ ಸಂಖ್ಯೆಯಲ್ಲಿ ನೆರೆದಿದ್ದರು. ಪುಷ್ಪವೃಷ್ಟಿಯ ನಡುವೆ ಸಾಗಿದ ಮಹಾರಥದ ದೃಶ್ಯ ಭಕ್ತರಲ್ಲಿ ವಿಶೇಷ ಭಾವೋದ್ರೇಕ ಮೂಡಿಸಿತು. ಶ್ರೀ ರಾಘವೇಂದ್ರ ಸ್ವಾಮಿಗಳ ಹಾಗೂ ಶ್ರೀ ಪ್ರಹ್ಲಾದರಾಜರ ನಾಮಸ್ಮರಣೆಯೊಂದಿಗೆ ಭಕ್ತರು ಮಹಾರಥೋತ್ಸವದಲ್ಲಿ ಪಾಲ್ಗೊಂಡು ಪುನೀತರಾದರು.

ಉತ್ತರಾರಾಧನಾ ಮಹೋತ್ಸವದ ಹಿನ್ನೆಲೆಯಲ್ಲಿ ದೇಶದ ವಿವಿಧ ರಾಜ್ಯಗಳಿಂದ ಸಾವಿರಾರು ಭಕ್ತರು ಮಂತ್ರಾಲಯಕ್ಕೆ ಆಗಮಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಮೂಲ ಬೃಂದಾವನದ ದರ್ಶನ ಪಡೆದು ಕೃಪಾಶೀರ್ವಾದಕ್ಕೆ ಪಾತ್ರರಾದರು. ಶ್ರೀಮಠದ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ಭಕ್ತರಿಂದ ತುಂಬಿ ತುಳುಕುತ್ತಿದ್ದವು.

ಉತ್ತರಾರಾಧನೆಯ ಅಂಗವಾಗಿ ನಡೆದ ಶ್ರೀ ಪ್ರಹ್ಲಾದರಾಜರ ಮೆರವಣಿಗೆ, ಗುರುಸಾರ್ವಭೌಮ ವಿದ್ಯಾಪೀಠದ ಕಾರ್ಯಕ್ರಮ, ವಸಂತೋತ್ಸವ, ವಿಶೇಷ ಪೂಜೆ, ರಥಾಂಗ ಪೂಜೆ ಹಾಗೂ ಭವ್ಯ ಮಹಾರಥೋತ್ಸವಗಳು ಶ್ರೀಮಠದ ಸಾಂಪ್ರದಾಯಿಕ ವೈಭವವನ್ನು ಅನಾವರಣಗೊಳಿಸಿದವು.

ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಸಾನ್ನಿಧ್ಯದಲ್ಲಿ ನೆರವೇರಿದ ಉತ್ತರಾರಾಧನಾ ಮಹೋತ್ಸವವು ಸಾವಿರಾರು ಭಕ್ತರಿಗೆ ಅಪೂರ್ವ ಧಾರ್ಮಿಕ ಅನುಭವ ನೀಡಿದ್ದು, ಮಂತ್ರಾಲಯ ಕ್ಷೇತ್ರವು ದಿನವಿಡೀ ಶ್ರೀ ರಾಘವೇಂದ್ರ ಸ್ವಾಮಿಗಳ ನಾಮಸ್ಮರಣೆ, ವೇದಘೋಷ ಹಾಗೂ ಭಕ್ತಿಯ ಸಂಭ್ರಮದಿಂದ ಕಂಗೊಳಿಸಿತು.

# ಭೂಮಾನಂದ ಕುಟುಂಬಕ್ಕೆ ಶಾಸಕಿ ಕರಿಯಮ್ಮ ಜಿ. ನಾಯಕ್ ಭರವಸೆ ಹಾಗೂ ಸ್ಪಷ್ಟನೆ

ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ವಿಶೇಷವಾಗಿ ಅವರ ಪತ್ನಿಗೆ ಸರ್ಕಾರಿ ಉದ್ಯೋಗ ಕಲ್ಪಿಸುವ ಬೇಡಿಕೆಯನ್ನು ಸರ್ಕಾರದ ಮಟ್ಟದಲ್ಲಿ ಗಂಭೀರವಾಗಿ ಪರಿಗಣಿಸುವಂತೆ ಒತ್ತಾಯಿಸಲಾಗುವುದು ಎಂದು ಶಾಸಕಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ದೇವದುರ್ಗ ತಾಲೂಕು ಅಧ್ಯಕ್ಷ ಬಸನಗೌಡ ದೇಸಾಯಿ, ತಹಸೀಲ್ದಾರ್ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರಾಜಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕುಟುಂಬಕ್ಕೆ ಶೀಘ್ರ ನ್ಯಾಯ ಒದಗಿಸಲಾಗುವುದು: ಸಚಿವ ಡಾ.ಅಜಯ್ ಧರ್ಮಸಿಂಗ್

ಒಕ್ಕೂಟ ರಾಯಚೂರು ವತಿಯಿಂದ ಹೊಕ್ರಾಣಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆ ಸ್ಥಳಕ್ಕೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಸೇರಿದಂತೆ ವಿವಿಧ ಗಣ್ಯರು ಭೇಟಿ ನೀಡಿ ಅಹವಾಲು ಸ್ವೀಕರಿಸಿದರು.

ಈ ವೇಳೆ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಇತ್ತೀಚೆಗೆ ನಡೆದ ಕ್ರೂರ ಹಾಗೂ ಅಮಾನವೀಯ ಘಟನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ನೊಂದ ಕುಟುಂಬಕ್ಕೆ ಶೀಘ್ರ ನ್ಯಾಯ ಒದಗಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಸ್ಥಳೀಯ ನಾಯಕರೊಂದಿಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಈ ವಿಷಯವನ್ನು ಮಾನ್ಯ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರ ಗಮನಕ್ಕೆ ತರಲಾಗಿದೆ. ಘಟನೆ ನಡೆದ ಕೆಲವೇ ದಿನಗಳಲ್ಲಿ ಸರ್ಕಾರ ಅಗತ್ಯ ಕಾನೂನು ಕ್ರಮಗಳನ್ನು ಕೈಗೊಂಡಿದೆ ಎಂದರು.

ಪ್ರಕರಣಕ್ಕೆ ಸಂಬಧಿಸಿದತೆ ಡಿಸಿಆರ್‌ಇ ಹಾಗೂ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಗತ್ಯವಿರುವ ಹೆಚುವರಿ ಸಿಬ್ಬಂದಿಯನ್ನು ಭರ್ತಿ ಮಾಡುವ ಕುರಿತು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರೊಂದಿಗೆ ಚರ್ಚಿಸಲಾಗಿದೆ ಎಂದರು.

ಜಿಲ್ಲಾಡಳಿತದ ವತಿಯಿಂದ ತಕ್ಷಣದ ಪರಿಹಾರ ಹಾಗೂ ಅಗತ್ಯ ಸೌಲಭ್ಯಗಳನ್ನು ಈಗಾಗಲೇ ಒದಗಿಸಲಾಗಿದೆ. ಮೃತ ಅಶ್ವಿನಿ ಅವರ ಕುಟುಂಬದವರನ್ನು ವೈಯಕ್ತಿಕವಾಗಿ ಭೇಟಿ ಮಾಡಿ ಸಾಂತ್ವನ ಹೇಳಲಾಗಿದ್ದು, ಅವರ ಇಬ್ಬರು ಮಕ್ಕಳ ಭವಿಷ್ಯಕ್ಕಾಗಿ ಸರ್ಕಾರದಿಂದ ಸಾಧ್ಯವಿರುವ ಎಲ್ಲಾ ಅನುಕೂಲಗಳನ್ನು ಮಾಡಿಕೊಡಲಾಗುವುದು ಎಂದರು.

ಮಹಿಳೆಯರ ಭದ್ರತೆ ಹಾಗೂ ನೈರ್ಮಲ್ಯಕ್ಕೆ ಆದ್ಯತೆ: ಎಸ್‌ಸಿ/ಎಸ್‌ಟಿ ಕಾಲೋನಿಗಳು ಹಾಗೂ ಪ್ರಮುಖ ಓಣಿಗಳಲ್ಲಿ ಮಹಿಳೆಯರ ಗೌರವ ಮತ್ತು ನೈರ್ಮಲ್ಯ ಕಾಪಾಡಲು ಶೌಚಾಲಯಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ವತಿಯಿಂದ ಕಳೆದ ವರ್ಷ 25 ಕೋಟಿ ರೂ. ಅನುದಾನ ನಮ್ಮ ಭಾಗದ ಶೌಚಾಲಯಗಳಿಗಾಗಿ ಕಾಯ್ದಿರಿಸಲಾಗಿದ್ದು, ಈಗಾಗಲೇ ಕಾಮಗಾರಿಗಳು ಪ್ರಾರಂಭವಾಗಿವೆ. ಸಂತ್ರಸ್ತರಿಗೆ ನ್ಯಾಯ ಒದಗಿಸುವಲ್ಲಿ ಯಾವುದೇ ರೀತಿಯ ವಿಳಂಬ ಧೋರಣೆಗೆ ಆಸ್ಪದ ನೀಡುವುದಿಲ್ಲ. ಸರ್ಕಾರ ಸಂಪೂರ್ಣವಾಗಿ ನೊಂದ ಕುಟುಂಬದ ಪರವಾಗಿದ್ದು, ಅಗತ್ಯವಿರುವ ಎಲ್ಲಾ ತನಿಖಾ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಸಚಿವರು ಭರವಸೆ ನೀಡಿದರು.

ಸಂತ್ರಸ್ತ ಕುಟುಂಬಕ್ಕೆ ಸರ್ಕಾರಿ ಉದ್ಯೋಗ, ಭೂಮಿ ಹಂಚಿಕೆ, ನೈರ್ಮಲ್ಯ ಹಾಗೂ ಶೌಚಾಲಯ ಸೌಕರ್ಯ ಸೇರಿದಂತೆ ಇನ್ನಿತರ ಅಗತ್ಯ ಪರಿಹಾರಗಳನ್ನು ಒದಗಿಸಲಾಗುತ್ತದೆ ಎಂದು ಸಚಿವರು ಹೇಳಿದರು.

ಸಿಐಡಿ / ಎಸ್‌ಐಟಿ ತನಿಖೆಗೆ ಮನವಿ: ಪ್ರಕರಣವನ್ನು ಸಿಐಡಿ ಅಥವಾ ಎಸ್‌ಐಟಿ ತನಿಖೆಗೆ ವಹಿಸಬೇಕು ಎನ್ನುವ ಸಾರ್ವಜನಿಕರ ಹಾಗೂ ಕುಟುಂಬಸ್ಥರ ಬೇಡಿಕೆಯನ್ನು ಈಗಾಗಲೇ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರ ಗಮನಕ್ಕೆ ತರಲಾಗಿದೆ. ಮುಖ್ಯಮಂತ್ರಿಗಳಿಗೆ ಈ ಕುರಿತು ಸಂಪೂರ್ಣ ವರದಿ ಹಾಗೂ ಮಾಹಿತಿಯನ್ನು ತಲುಪಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು ಅವರು ಮಾತನಾಡಿ, ಜಿಲ್ಲೆಯಲ್ಲಿ ನಡೆದಂತಹ ಈ ಘಟನೆಗಳು ನಾಗರಿಕರ ಸಮಾಜ ತಲೆ ತೆಗ್ಗಿಸುವಂತೆ ಮಾಡಿದೆ, ಪ್ರಕರಣಕ್ಕೆ ಸಂಬಧಿಸಿದತೆ ಗೃಹ ಸಚಿವರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಚಿವರೊಂದಿಗೆ ಈಗಾಗಲೇ ಚರ್ಚಿಸಲಾಗಿದ್ದು, ಮುಖ್ಯಮಂತ್ರಿಗಳೊದಿಗೆ ಚರ್ಚಿಸಲು

ನಿಯೋಗವನ್ನು ಕರೆದೊಯ್ಯಲು ವ್ಯವಸ್ಥೆ ಮಾಡಲಾಗಿದೆ. ಅಲ್ಲದೆ ಪ್ರಕರಣಕ್ಕೆ ಸಂಬಧಿಸಿದತೆ ತನಿಖೆಯನ್ನು ನಡೆಸಲಾಗುತ್ತಿದೆ. ಒಟ್ಟಾರೆಯಾಗಿ ಯಾರಿಗೂ ಅನ್ಯಾಯವಾಗದಂತೆ ತನಿಖೆ ಮಾಡಬೇಕು. ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಆಗಬೇಕು. ಜಿಲ್ಲೆಯಲ್ಲಿ ಎಲ್ಲರೂ ಸಹೋದರತ್ವ ಆಗಿರಬೇಕು ಎಂದರು.

ಇದೇ ಸಂದರ್ಭದಲ್ಲಿ ಸಂಸದರಾದ ಜಿ.ಕುಮಾರ ನಾಯಕ, ಮಾನ್ವಿ ಶಾಸಕರಾದ ಹಂಪಯ್ಯ ನಾಯಕ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಸಿರವಾರ ತಹಶಿಲ್ದಾರ್ ಚಂದ್ರಶೇಖರ ಪವಾರ್, ವಿವಿಧ ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಹೊಕ್ರಾಣಿ ಗ್ರಾಮಸ್ಥರು ಉಪಸ್ಥಿತರಿದ್ದರು.

# ಶ್ರೀ ರಾಯರ ದರ್ಶನ ಪಡೆದ ಬಿ.ಎಸ್. ಯಡಿಯೂರಪ್ಪ, ಬಿ.ವೈ. ವಿಜಯೇಂದ್ರ



ಮಂತ್ರಾಲಯ: ಕರ್ನಾಟಕದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಬಿಜೆಪಿ ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಪವಿತ್ರ ಪುಣ್ಯಕ್ಷೇತ್ರ ಶ್ರೀಕ್ಷೇತ್ರ ಮಂತ್ರಾಲಯಕ್ಕೆ ಭೇಟಿ ನೀಡಿ ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ ಮೂಲ ಬೃಂದಾವನದ ದರ್ಶನ ಪಡೆದು ಭಕ್ತಿಯಿಂದ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಸನ್ನಿಧಿಯಲ್ಲಿ ಕೆಲಕಾಲ ಭಕ್ತಿಯಿಂದ ಪ್ರಾರ್ಥಿಸಿದ ಉಭಯ ನಾಯಕರು, ರಾಜ್ಯದ ಜನತೆಗೆ ಸುಖ, ಶಾಂತಿ, ಸಮೃದ್ಧಿ ದೊರೆಯಲಿ ಹಾಗೂ ನಾಡಿನ ಸರ್ವತೋಮುಖ ಅಭಿವೃದ್ಧಿಯಾಗಲಿ ಎಂದು ಶ್ರೀ ರಾಯರಲ್ಲಿ ಪ್ರಾರ್ಥಿಸಿದರು.

ನಂತರ ಶ್ರೀ ರಾಘವೇಂದ್ರಸ್ವಾಮಿ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ದರ್ಶನ ಪಡೆದು ಆಶೀರ್ವಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಶೇಷವಸ್ತ್ರ ಹೊದಿಸಿ, ಮಂತ್ರಾಕ್ಷತೆ ನೀಡಿ ಆಶೀರ್ವದಿಸಿದರು. ಇದೇ ವೇಳೆ ಶ್ರೀಮಠದ ವತಿಯಿಂದ ಸ್ಮರಣಿಕೆಯನ್ನು ನೀಡಿ ಗೌರವಿಸಲಾಯಿತು.

ಉಭಯ ನಾಯಕರಿಗೆ ಅನುಗ್ರಹಿಸಿದ ಶ್ರೀಪಾದಂಗಳವರು, ಶ್ರೀ ಹರಿ-ವಾಯು-ಗುರುಗಳ ಹಾಗೂ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಅನುಗ್ರಹ ಸದಾ ಇರಲಿ, ಕರ್ನಾಟಕದ ಜನತೆಗೆ ಒಳಿತಾಗಲಿ ಎಂದು ಆಶೀರ್ವಚನ ನೀಡಿದರು.

ಶ್ರೀಕ್ಷೇತ್ರ ಮಂತ್ರಾಲಯಕ್ಕೆ ಆಗಮಿಸಿದ ಯಡಿಯೂರಪ್ಪ ಹಾಗೂ ವಿಜಯೇಂದ್ರ ಅವರು ಶ್ರೀ ರಾಯರ ಮೂಲ ಬೃಂದಾವನದ ದರ್ಶನ ಮತ್ತು ಶ್ರೀಪಾದಂಗಳವರ ಆಶೀರ್ವಾದ ಪಡೆದು ಧನ್ಯತಾಭಾವ ವ್ಯಕ್ತಪಡಿಸಿದರು.

# ಶಿವಪೂಜಿ ಈರಪ್ಪಗೌಡ ಪುಣ್ಯಸ್ಮರಣೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ, ಸಸಿ ವಿತರಣೆ

ಮಾನ್ವಿ: ತಾಲೂಕಿನ ಚೀಕಲಪರ್ವಿ ಗ್ರಾಮದ ಶ್ರೀ ರುದ್ರಮುನೀಶ್ವರ ಶಾಲೆಯಲ್ಲಿ ದಿ. ಶಿವಪೂಜಿ ಈರಪ್ಪಗೌಡ ಚೀಕಲಪರ್ವಿ ಅವರ ಮೂರನೇ ವರ್ಷದ ಪುಣ್ಯಸ್ಮರಣೆಯನ್ನು ಶ್ರೀ ಶಿವಪೂಜಿ ಎಜ್ಯುಕೇಶನಲ್ ಮತ್ತು ಚಾರಿಟೆಬಲ್ ಟ್ರಸ್ಟ್ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ ಹಾಗೂ ಸಸಿಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಎಸ್. ಬಸವರಾಜಗೌಡ ಚೀಕಲಪರ್ವಿ, ಗ್ರಾಮೀಣ ಭಾಗದ ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಗತ್ಯ ಕಲಿಕಾ ಸಾಮಗ್ರಿ ಹಾಗೂ ಪರಿಕರಗಳನ್ನು ವಿತರಿಸುವ ಮೂಲಕ ಅವರ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲಾಗುತ್ತಿದೆ ಎಂದು ತಿಳಿಸಿದರು.





ವಿದ್ಯಾರ್ಥಿಗಳಲ್ಲಿ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಶಾಲಾ ಮಕ್ಕಳಿಗೆ ಉಚಿತವಾಗಿ ಸಸಿಗಳನ್ನು ವಿತರಿಸುವುದರ ಜೊತೆಗೆ ಶಾಲಾ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಹಸಿರೀಕರಣಕ್ಕೆ ಆದ್ಯತೆ ನೀಡುವುದು ಟ್ರಸ್ಟ್‌ನ ಪ್ರಮುಖ ಉದ್ದೇಶಗಳಲ್ಲಿ ಒಂದಾಗಿದೆ ಎಂದರು.

ಈ ಸಂದರ್ಭದಲ್ಲಿ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕಗಳು, ಪೆನ್ನುಗಳು ಹಾಗೂ ವಿವಿಧ ಸಸಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ರುದ್ರಮುನೀಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಗಿರಿಧರ ಪೂಜಾರಿ, ಗ್ರಾಮದ ಮುಖಂಡರಾದ ವಿರುಪಯ್ಯಸ್ವಾಮಿ ಗುರುವಿನಮಠ, ಬನ್ನೀರೆ ಅಮರೇಗೌಡ, ಮಲ್ಲನಗೌಡ ಶಿವಪೂಜಿ, ಮುಳ್ಳೂರು ರುದ್ರಪ್ಪಗೌಡ, ಮೇಟಿ ಶಂಕ್ರಪ್ಪಗೌಡ, ಶಿವಕುಮಾರಗೌಡ ಪೊಲೀಸ್ ಪಾಟೀಲ್, ನರಸರೆಡ್ಡಿ ಜಾಗೀರಪನ್ನೂರು, ನಾಗರಾಜ ಶೆಟ್ಟಿ, ಬೊಮ್ಮರೆಡ್ಡಿ ರೆಡ್ಡೆಪ್ಪಗೌಡ, ರುದ್ರಪ್ಪಗೌಡ, ಬಸವರಾಜಗೌಡ ಕಾತರಕಿ, ಶೇಖರಪ್ಪಗೌಡ ಶಿವಪೂಜಿ, ಚಂದ್ರಪ್ಪಗೌಡ ಶಿವಪೂಜಿ, ರಾಜಪ್ಪಗೌಡ ಶಿವಪೂಜಿ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬಾಲಕಿಯರ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿಯರಿಗೆ ಶೂ, ಸಾಕ್ಸ್ ವಿತರಣೆ



ದೇವದುರ್ಗ: ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರಿಗೆ ಸರ್ಕಾರದಿಂದ ವಿತರಿಸಲಾದ ಶೂ ಮತ್ತು ಸಾಕ್ಸ್‌ಗಳನ್ನು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ವೆಂಕಟೇಶ ನಾಯಕ ಸೋಮಕರ ಹಾಗೂ ನಿಕಟಪೂರ್ವ ಅಧ್ಯಕ್ಷ ಬಸವರಾಜ ನಾಯಕ ಗೋಸಲ್ ಜಂಟಿಯಾಗಿ ವಿತರಿಸಿದರು.

ವಿದ್ಯಾರ್ಥಿನಿಯರು ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ವಿದ್ಯಾಭ್ಯಾಸದಲ್ಲಿ ಉತ್ತಮ ಸಾಧನೆ ಮಾಡಬೇಕು ಎಂಬ ಆಶಯವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯಗುರು ವಿಜಯಲಕ್ಷ್ಮಿ, ದೈಹಿಕ ಶಿಕ್ಷಣ ಶಿಕ್ಷಕಿ ಮಮತಾ ಆದಿ, ದೈಹಿಕ ಶಿಕ್ಷಣ ಶಿಕ್ಷಕ ಹಾಗೂ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹನುಮಂತ್ರಾಯ ಶಾಖೆ, ಶಿಕ್ಷಕ ಮೃತ್ಯುಂಜಯ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ಇತರರು ಉಪಸ್ಥಿತರಿದ್ದರು.

# ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವದ ಉತ್ತರಾರಾಧನೆ ಸಂಭ್ರಮ





ಮಾನ್ವಿ: ಪಟ್ಟಣದ ಶ್ರೀ ಮಂತ್ರಾಲಯ ಶ್ರೀ ರಾಘವೇಂದ್ರಸ್ವಾಮಿಗಳ ಮಠದಲ್ಲಿ ಸೋಮವಾರ ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವದ ಉತ್ತರಾರಾಧನೆ ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದಿಂದ ನೆರವೇರಿತು.

ಉತ್ತರಾರಾಧನೆ ಅಂಗವಾಗಿ ಬೆಳಿಗ್ಗೆಯಿಂದಲೇ ಶ್ರೀ ರಾಘವೇಂದ್ರಸ್ವಾಮಿಗಳ ಮೃತಿಕಾ ವೃಂದಾವನದಲ್ಲಿ ಸುಪ್ರಭಾತ ಸೇವೆ, ಅಷ್ಟೋತ್ತರ ಪಾರಾಯಣ, ಫಲ ಪಂಚಾಮೃತಾಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ವೃಂದಾವನಕ್ಕೆ ವಿವಿಧ ಬಗೆಯ ಹೂವುಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು.

ಹೈದರಾಬಾದ್‌ನ ಪಂಡಿತ ಶ್ರೀ ಪ್ರಾಣೇಶಾಚಾರ್ಯ ಚಿಕ್ಕದಿನ್ನಿ ಅವರು ಶ್ರೀ ಗುರು ರಾಘವೇಂದ್ರ ಸಾರ್ವಭೌಮರ ಜೀವನ ಚರಿತ್ರೆ, ಮಹಿಮೆ ಹಾಗೂ ಅವರ ಆಧ್ಯಾತ್ಮಿಕ ಸಂದೇಶಗಳ ಕುರಿತು ಉಪನ್ಯಾಸ ನೀಡಿದರು.

ಉತ್ತರಾರಾಧನೆಯ ವಿಶೇಷವಾಗಿ ಶ್ರೀ ಪ್ರಹ್ಲಾದರಾಜರ ಉತ್ಸವ ಮೂರ್ತಿಗೆ ಕನಕಾಭಿಷೇಕ ನೆರವೇರಿಸಲಾಯಿತು. ಬಳಿಕ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಪಲ್ಲಕ್ಕಿ ಮೆರವಣಿಗೆ ನಡೆಸಲಾಯಿತು. ನಂತರ ರಥದಲ್ಲಿ ಪ್ರತಿಷ್ಠಾಪಿಸಿ ಪಟ್ಟಣದ ಪ್ರಮುಖ ರಾಜಬೀದಿಗಳಲ್ಲಿ ವೈಭವದ ರಥೋತ್ಸವ ನೆರವೇರಿಸಲಾಯಿತು. ರಥೋತ್ಸವದ ಸಂದರ್ಭದಲ್ಲಿ ಮಹಿಳೆಯರು ಪ್ರದರ್ಶಿಸಿದ ಕೋಲಾಟ ಭಕ್ತರ ಗಮನ ಸೆಳೆಯಿತು. ವಿವಿಧ ಭಜನಾ ಮಂಡಳಿಗಳ ಸದಸ್ಯರು ಭಜನೆ, ಸಂಕೀರ್ತನೆಗಳೊಂದಿಗೆ ಪಾಲ್ಗೊಂಡು ಧಾರ್ಮಿಕ ಸಂಭ್ರಮವನ್ನು ಹೆಚ್ಚಿಸಿದರು.

ಪಟ್ಟಣದ ವಿಪ್ರ ಸಮಾಜ, ಆರ್ಯವೈಶ್ಯ ಸಮಾಜ ಸೇರಿದಂತೆ ವಿವಿಧ ಸಮಾಜಗಳ ಸಾವಿರಾರು ಭಕ್ತರು ಆರಾಧನಾ ಮಹೋತ್ಸವದಲ್ಲಿ ಭಾಗವಹಿಸಿ ಶ್ರೀ ರಾಘವೇಂದ್ರಸ್ವಾಮಿಗಳ ವೃಂದಾವನದ ದರ್ಶನ ಪಡೆದು ಫಲಮಂತ್ರಾಕ್ಷತೆ ಸ್ವೀಕರಿಸಿದರು. ಭಕ್ತರು ಪರಸ್ಪರ ವಿವಿಧ ಬಣ್ಣದ ಗುಲಾಲು ಎರಚಿಕೊಂಡು ಉತ್ತರಾರಾಧನೆಯ ಸಂಭ್ರಮವನ್ನು ಹಂಚಿಕೊಂಡರು.

ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ, ರಾಜಾ ರಾಮಚಂದ್ರ ನಾಯಕ ಹಾಗೂ ಕುಟುಂಬದವರು ಮಠಕ್ಕೆ ಭೇಟಿ ನೀಡಿ ಶ್ರೀ ರಾಘವೇಂದ್ರಸ್ವಾಮಿಗಳಿಗೆ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ಶ್ರೀ ರಾಘವೇಂದ್ರಸ್ವಾಮಿಗಳ ಮಠದ ಗೌರವ ವಿಚಾರಣಾಕರ್ತ ಮುದ್ದುರಂಗರಾವು ಮುತಾಲಿಕ್, ಮನ್ಸಾಲಿ ಯಂಕಯ್ಯಶೆಟ್ಟಿ, ನವೀನ್ ಕುಮಾರ್ ಹೆಚ್. ಮೌನೇಶಗೌಡ, ಮಹಾಂತೇಶ ಸ್ವಾಮಿ ರೌಡೂರು ಸೇರಿದಂತೆ ಶ್ರೀಮಠದ ಅರ್ಚಕರು ಹಾಗೂ ಪ್ರಮುಖರು ಉತ್ತರಾರಾಧನೆಯ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನಿರ್ವಹಿಸಿದರು.

# ದಲಿತರ ಮೇಲಿನ ದೌರ್ಜನ್ಯ ತಡೆಗೆ ಕಠಿಣ ಕ್ರಮಕ್ಕೆ ಆಗ್ರಹ: ಯಲ್ಲಪ್ಪ ದೊಡ್ಮನೆ



ರಾಯಚೂರು: ಜಿಲ್ಲೆಯಲ್ಲಿ ದಲಿತರ ಮೇಲಿನ ಕೊಲೆ, ಅತ್ಯಾಚಾರ, ದೌರ್ಜನ್ಯ ಹಾಗೂ ದಬ್ಬಾಳಿಕೆ ಪ್ರಕರಣಗಳು ಹೆಚ್ಚುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ, ಇಂತಹ ಘಟನೆಗಳಿಗೆ ಕಡಿವಾಣ ಹಾಕಲು ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕೂಲಿ ಕಾರ್ಮಿಕರ ಸಂಘದ ರಾಜ್ಯ ಸಮಿತಿ ಆಗ್ರಹಿಸಿದೆ.

ಸಂಘದ ರಾಜ್ಯಾಧ್ಯಕ್ಷ ಯಲ್ಲಪ್ಪ ದೊಡ್ಮನೆ ಆಲ್ದರ್ತಿ ಅವರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಂಸದ ಕುಮಾರ್ ನಾಯಕ, ಮಾಜಿ ಸಚಿವ ಬೋಸರಾಜ್, ದೇವದುರ್ಗ ಶಾಸಕಿ ಕರಿಯಮ್ಮ ಜಿ. ನಾಯಕ ಹಾಗೂ ಮಾನ್ವಿ ಶಾಸಕ ಹಂಪಯ್ಯ ನಾಯಕ ಉಪಸ್ಥಿತರಿದ್ದರು.

ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದ ಅವರ ಹತ್ಯೆ ಪ್ರಕರಣದಲ್ಲಿ ಎಂಟು ಜನರ ವಿರುದ್ಧ ಪ್ರಕರಣ ದಾಖಲಾಗಿದ್ದು, ಕೊಲೆಗೆ ಪ್ರಚೋದನೆ ನೀಡಿದ ಆರೋಪ ಎದುರಿಸುತ್ತಿರುವ ಭೀಮರಾಯ ಹದ್ದಿನಾಳ ಅವರನ್ನು ಇದುವರೆಗೆ ಬಂಧಿಸಿಲ್ಲ ಎಂದು ಸಂಘ ಆರೋಪಿಸಿದೆ. ಪ್ರಕರಣದ ಆರೋಪಿಗಳನ್ನು ಶೀಘ್ರ ಬಂಧಿಸಿ ಸೂಕ್ತ ತನಿಖೆ ನಡೆಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಬಾಲಕಿಯ ಮೇಲಿನ ಅತ್ಯಾಚಾರ ಹಾಗೂ ಹತ್ಯೆ ಪ್ರಕರಣ, ಲಿಂಗಸುಗೂರು ಪಟ್ಟಣದ ಕರಡಕಲ್ ವಾರ್ಡ್ ವ್ಯಾಪ್ತಿಯಲ್ಲಿ ಮಹಿಳೆಯ ಹತ್ಯೆ ಪ್ರಕರಣ ಹಾಗೂ ಮಾನ್ವಿ ತಾಲೂಕಿನ ನಕ್ಕುಂದಿ ಗ್ರಾಮದ ರವಿ ಮಾದಿಗ ಹತ್ಯೆ ಪ್ರಕರಣಗಳ ಬಗ್ಗೆಯೂ ಸಮಗ್ರ ತನಿಖೆ ನಡೆಸಬೇಕು ಎಂದು ಸಂಘ ಆಗ್ರಹಿಸಿದೆ.

ಈ ಎಲ್ಲ ಪ್ರಕರಣಗಳನ್ನು ಸಿಓಡಿ ತನಿಖೆಗೆ ವಹಿಸಿ, ನೊಂದ ಕುಟುಂಬಗಳಿಗೆ ಸೂಕ್ತ ಪರಿಹಾರ ಮತ್ತು ಭದ್ರತೆ ಒದಗಿಸಬೇಕು. ದಲಿತರ ಮೇಲಿನ ಅಸ್ಪೃಶ್ಯತೆ, ದೌರ್ಜನ್ಯ ಮತ್ತು ದಬ್ಬಾಳಿಕೆ ನಿರ್ಮೂಲನೆಗೆ ಸರ್ಕಾರ ಪರಿಣಾಮಕಾರಿ ಕ್ರಮ ಕೈಗೊಳ್ಳುವುದರ ಜೊತೆಗೆ ಅನ್ಯಾಯದ ವಿರುದ್ಧ ಹೋರಾಟ ನಡೆಸುವವರಿಗೆ ಅಗತ್ಯ ರಕ್ಷಣೆ ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

# ಕಾಲುವೆ ನೀರು ಹಂಚಿಕೆಯಲ್ಲಿ ತಾರತಮ್ಯ: ಕರಡಿಗುಡ್ಡ ರೈತರ ಆಕ್ರೋಶ




ಮಾನ್ವಿ: ತುಂಗಭದ್ರಾ ಎಡದಂಡೆ ಕಾಲುವೆಯ ಸಿರವಾರ ವಿಭಾಗದ ಡಿಸ್ಟ್ರಿಬ್ಯೂಟರಿ ಸಂಖ್ಯೆ 85/4, 85/5 ಹಾಗೂ 85/6 ಕಾಲುವೆಗಳಿಗೆ ಸಮರ್ಪಕವಾಗಿ ನೀರು ಹರಿಸುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿ, ಮೇಲ್ಭಾಗದಲ್ಲಿರುವ ಅನಧಿಕೃತ ತೂಬುಗಳನ್ನು ಬಂದ್ ಮಾಡಿ ಕೆಳಭಾಗದ ರೈತರ ಜಮೀನುಗಳಿಗೆ ತಕ್ಷಣ ನೀರು ಹರಿಸುವಂತೆ ಒತ್ತಾಯಿಸಿ ಕರಡಿಗುಡ್ಡ ಗ್ರಾಮದ ರೈತರು ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಗಣೇಶ ನಾಯಕ ಕರಡಿಗುಡ್ಡ ಮಾತನಾಡಿ, ಪ್ರತಿವರ್ಷ ಮಳೆ ಕೊರತೆಯಾದ ಸಂದರ್ಭದಲ್ಲಿ ರೈತರು ನೀರಿಗಾಗಿ ಹೋರಾಟ ನಡೆಸುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಸರ್ಕಾರ ನೀರಾವರಿ ಕಾಯ್ದೆಯಡಿ ಸೂಕ್ತ ನಿಯಮಗಳನ್ನು ರೂಪಿಸಿ ವೈಜ್ಞಾನಿಕವಾಗಿ ನೀರು ಹಂಚಿಕೆ ಮಾಡುವಲ್ಲಿ ವಿಫಲವಾಗಿದೆ. ಕಾಲುವೆ ಉನ್ನತೀಕರಣದ ಹೆಸರಿನಲ್ಲಿ ಸಾರ್ವಜನಿಕರ ತೆರಿಗೆ ಹಣವನ್ನು ಖರ್ಚು ಮಾಡುತ್ತಿದ್ದರೂ ಅದರ ಸಮರ್ಪಕ ಪ್ರಯೋಜನ ರೈತರಿಗೆ ದೊರೆಯುತ್ತಿಲ್ಲ ಎಂದು ಆರೋಪಿಸಿದರು.

ಕೇವಲ 90 ದಿನಗಳ ಕಾಲ ನೀರು ನೀಡುವುದಾಗಿ ತಿಳಿಸಿ, ಲಘು ನೀರಾವರಿ ಬೆಳೆಗಳನ್ನೇ ಬೆಳೆಯಬೇಕೆಂದು ರೈತರ ಮೇಲೆ ನಿರ್ಬಂಧ ಹೇರುವುದು ಸರಿಯಲ್ಲ. ನಿರಂತರ ನೀರಾವರಿಗೆ ಒಳಪಟ್ಟ ಜಮೀನುಗಳಲ್ಲಿ ತೇವಾಂಶ ಹೆಚ್ಚಿರುವುದರಿಂದ ಲಘು ಬೆಳೆಗಳು ಬೇರು ಕೊಳೆ ರೋಗಕ್ಕೆ ತುತ್ತಾಗುವ ಸಾಧ್ಯತೆ ಇದೆ. ಇದರಿಂದ ರೈತರು ಅನಿವಾರ್ಯವಾಗಿ ಭತ್ತ, ಕಬ್ಬು ಸೇರಿದಂತೆ ಹೆಚ್ಚು ನೀರು ಅಗತ್ಯವಿರುವ ಬೆಳೆಗಳನ್ನು ಬೆಳೆಯಬೇಕಾಗುತ್ತದೆ. ಕೃಷಿ ವಿಜ್ಞಾನಿಗಳ ಸಲಹೆ ಪಡೆಯದೆ ಅಧಿಕಾರಿಗಳು ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳಬಾರದು ಎಂದು ಒತ್ತಾಯಿಸಿದರು.

ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಯಲ್ಲಿ ಕನಿಷ್ಠ 2.5 ಅಡಿ ನೀರಿನ ಲಭ್ಯತೆ ಇದ್ದಾಗ ಮೇಲ್ಭಾಗದ 85/1, 85/2 ಹಾಗೂ 85/3 ಡಿಸ್ಟ್ರಿಬ್ಯೂಟರಿಗಳಿಗೆ ವಾರಬಂದಿ ಪದ್ಧತಿಯಡಿ ನೀರು ಹರಿಸುವುದನ್ನು ನಿಯಂತ್ರಿಸಬೇಕು. ಆಗ ಕೆಳಭಾಗದ 85/4, 85/5 ಹಾಗೂ 85/6 ಕಾಲುವೆಗಳ ವ್ಯಾಪ್ತಿಯ ರೈತರ ಜಮೀನುಗಳಿಗೂ ಸಮರ್ಪಕವಾಗಿ ನೀರು ತಲುಪಿಸಲು ಸಾಧ್ಯವಾಗುತ್ತದೆ. ಆದರೆ ಅಧಿಕಾರಿಗಳ ನಿರ್ಲಕ್ಷ್ಯ, ತಾರತಮ್ಯ ಹಾಗೂ ಪ್ರಭಾವಿ ಮುಖಂಡರ ಒತ್ತಡದಿಂದ ಕೆಳಭಾಗದ ರೈತರಿಗೆ ಅನ್ಯಾಯವಾಗುತ್ತಿದೆ ಎಂದು ಗಣೇಶ ನಾಯಕ ದೂರಿದರು.

ಕೆಳಭಾಗದ ರೈತರ ಹಿತದೃಷ್ಟಿಯಿಂದ ಮೇಲ್ಭಾಗದಲ್ಲಿರುವ ಅನಧಿಕೃತ ತೂಬುಗಳನ್ನು ತಕ್ಷಣ ಬಂದ್ ಮಾಡಿ ಕಾಲುವೆ ನೀರನ್ನು ನ್ಯಾಯಯುತವಾಗಿ ಹಂಚಿಕೆ ಮಾಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ರೈತರು ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ರಘುರಾಮ ನಾಯಕ, ನರೇಶಗೌಡ, ರೈತ ಸಂಘದ ಉಪಾಧ್ಯಕ್ಷ ಉರುಕುಂದ ನಾಯಕ, ರಾಮು, ಚನ್ನಬಸವ, ಹನುಮಯ್ಯ, ಯಂಕೋಬ, ಜಂಗ್ಲಿ, ಜಡ್ಡಿ ತಾತ, ವೀರಬಾಬು ಸೇರಿದಂತೆ ಹಲವು ರೈತರು ಉಪಸ್ಥಿತರಿದ್ದರು.

# ಹೂಡಿಕೆದಾರರ ಹಣ ಮರುಪಾವತಿಗೆ ಆಗ್ರಹ: ಪಾದಯಾತ್ರೆ, ಇಂದಿನಿಂದ ಅನಿರ್ದಿಷ್ಟಾವಧಿ ಧರಣಿ



ರಾಯಚೂರು: ದರ್ವೇಶ್ ಗ್ರೂಪ್ ಕಂಪನಿಯಲ್ಲಿ ಹಣ ಹೂಡಿಕೆ ಮಾಡಿ ಮರುಪಾವತಿಗಾಗಿ ಕಾಯುತ್ತಿರುವ ಸಾವಿರಾರು ಹೂಡಿಕೆದಾರರಿಗೆ ನ್ಯಾಯ ಒದಗಿಸಬೇಕು ಹಾಗೂ ಅವರ ಕಷ್ಟಪಟ್ಟು ಸಂಪಾದಿಸಿದ ಹಣವನ್ನು ಕಾನೂನುಬದ್ಧವಾಗಿ ಮರಳಿ ಪಡೆಯುವಂತೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ನಗರದಲ್ಲಿ ಶಾಂತಿಯುತ ಪಾದಯಾತ್ರೆ ನಡೆಸಿ, ನಂತರ ಟಿಪ್ಪು ಸುಲ್ತಾನ್ ಉದ್ಯಾನವನದಲ್ಲಿ ಇಂದಿನಿಂದ ಅನಿರ್ದಿಷ್ಟಾವಧಿ ಧರಣಿ ಆರಂಭಿಸಲಾಗುವುದು ಎಂದು ದರ್ವೇಶ್ ಕಂಪನಿಯ ಹೂಡಿಕೆದಾರರ ಹಿತಾಸಕ್ತಿ ವೇದಿಕೆಯ ಸಂಚಾಲಕ ಅಂಬಾಜಿ ರಾವ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾವಿರಾರು ಜನರು ತಮ್ಮ ಜೀವನದ ಉಳಿತಾಯ, ಕಷ್ಟಪಟ್ಟು ಸಂಪಾದಿಸಿದ ಹಣ ಹಾಗೂ ಭವಿಷ್ಯದ ಭದ್ರತೆಯ ಉದ್ದೇಶದಿಂದ ದರ್ವೇಶ್ ಗ್ರೂಪ್ ಕಂಪನಿಯಲ್ಲಿ ಹೂಡಿಕೆ ಮಾಡಿದ್ದರು. ಆದರೆ ಕಳೆದ ಸುಮಾರು ಎರಡೂವರೆ ವರ್ಷಗಳಿಂದ ಹಣ ಮರುಪಾವತಿಯಾಗದೆ ಹೂಡಿಕೆದಾರರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

ಹಣ ಮರಳಿ ಸಿಗದಿರುವುದರಿಂದ ಅನೇಕ ಕುಟುಂಬಗಳ ಜೀವನ ನಿರ್ವಹಣೆ, ಮಕ್ಕಳ ಶಿಕ್ಷಣ ಹಾಗೂ ಭವಿಷ್ಯದ ಯೋಜನೆಗಳ ಮೇಲೂ ಪರಿಣಾಮ ಬೀರಿದೆ. ಹೂಡಿಕೆದಾರರು ತಮ್ಮದೇ ಹಣವನ್ನು ಮರಳಿ ಪಡೆಯಲು ವರ್ಷಗಟ್ಟಲೆ ಕಾಯುವ ಪರಿಸ್ಥಿತಿ ಎದುರಾಗಿರುವುದು ನೋವಿನ ಸಂಗತಿಯಾಗಿದೆ ಎಂದು ಅವರು ತಿಳಿಸಿದರು.

ಪ್ರಕರಣದ ಕುರಿತು ಸಂಬಂಧಪಟ್ಟ ತನಿಖಾ ಸಂಸ್ಥೆಯಿಂದ ತನಿಖೆ ನಡೆಯುತ್ತಿದ್ದು, ಅದನ್ನು ತ್ವರಿತವಾಗಿ ಹಾಗೂ ನಿಷ್ಪಕ್ಷಪಾತವಾಗಿ ಪೂರ್ಣಗೊಳಿಸಬೇಕು. ತನಿಖೆಯಲ್ಲಿ ಲಭ್ಯವಾಗುವ ಸಾಕ್ಷ್ಯಾಧಾರಗಳ ಆಧಾರದ ಮೇಲೆ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ನ್ಯಾಯಾಲಯದ ವ್ಯಾಪ್ತಿಗೆ ಒಳಪಡುವ ವಿಷಯಗಳಲ್ಲಿ ಅಗತ್ಯ ಕಾನೂನು ಪ್ರಕ್ರಿಯೆಗಳನ್ನು ಶೀಘ್ರಗೊಳಿಸಿ ಹೂಡಿಕೆದಾರರ ಹಿತಾಸಕ್ತಿಯನ್ನು ರಕ್ಷಿಸಬೇಕು ಎಂದು ಆಗ್ರಹಿಸಿದರು.

ಈ ಹಿನ್ನೆಲೆಯಲ್ಲಿ ಸೆ.1ರಂದು ಬೆಳಿಗ್ಗೆ 10 ಗಂಟೆಗೆ ನಗರದ ಚಂದ್ರಮೌಳೇಶ್ವರ ವೃತ್ತದಿಂದ ಶಾಂತಿಯುತ ಪಾದಯಾತ್ರೆ ಆರಂಭವಾಗಲಿದೆ. ಚಂದ್ರಮೌಳೇಶ್ವರ ವೃತ್ತದಿಂದ ಮಹಾವೀರ ವೃತ್ತ, ಉಸ್ಮಾನಿಯಾ ಮಾರ್ಕೆಟ್, ತೀನ್ ಖಂದೀಲ್, ಸೂಪರ್ ಮಾರ್ಕೆಟ್, ಏಕ್ ಮೀನಾರ್ ಮಸೀದಿ, ನಗರಸಭೆ ಹಾಗೂ ಟಿಪ್ಪು ಸುಲ್ತಾನ್ ರಸ್ತೆ ಮೂಲಕ ಪಾದಯಾತ್ರೆ ಟಿಪ್ಪು ಸುಲ್ತಾನ್ ಉದ್ಯಾನವನ ತಲುಪಲಿದೆ. ಬಳಿಕ ಅಲ್ಲಿಯೇ ಅನಿರ್ದಿಷ್ಟಾವಧಿ ಧರಣಿ ಆರಂಭಿಸಲಾಗುವುದು ಎಂದು ತಿಳಿಸಿದರು.

ಪ್ರಕರಣದ ತನಿಖೆಯ ಪ್ರಸ್ತುತ ಸ್ಥಿತಿ ಹಾಗೂ ಮುಂದಿನ ಕ್ರಮಗಳ ಕುರಿತು ಹೂಡಿಕೆದಾರರಿಗೆ ಸ್ಪಷ್ಟ ಮಾಹಿತಿ ನೀಡಬೇಕು. ಹೂಡಿಕೆದಾರರ ಹಣವನ್ನು ಕಾನೂನುಬದ್ಧ ರೀತಿಯಲ್ಲಿ ಮರುಪಾವತಿಸಲು ಸರ್ಕಾರ ಮತ್ತು ಸಂಬಂಧಪಟ್ಟ ಅಧಿಕಾರಿಗಳು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ವೇದಿಕೆ ಒತ್ತಾಯಿಸಿದೆ.

ರಾಯಚೂರು ಜಿಲ್ಲೆಯ ಸಾರ್ವಜನಿಕರು, ವಿವಿಧ ಸಂಘ-ಸಂಸ್ಥೆಗಳು, ಸಾಮಾಜಿಕ ಸಂಘಟನೆಗಳು, ಸಮುದಾಯಗಳ ಮುಖಂಡರು, ಜನಪ್ರತಿನಿಧಿಗಳು ಹಾಗೂ ಎಲ್ಲ ರಾಜಕೀಯ ಪಕ್ಷಗಳ ಮುಖಂಡರು ಪಕ್ಷಭೇದ ಮರೆತು ಹೂಡಿಕೆದಾರರ ನ್ಯಾಯಯುತ ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಅಂಬಾಜಿ ರಾವ್ ಮನವಿ ಮಾಡಿದರು.

ಇದು ಯಾವುದೇ ವ್ಯಕ್ತಿ, ಸಮುದಾಯ ಅಥವಾ ರಾಜಕೀಯ ಪಕ್ಷದ ವಿರುದ್ಧದ ಹೋರಾಟವಲ್ಲ. ತಮ್ಮ ಕಷ್ಟಪಟ್ಟು ಸಂಪಾದಿಸಿದ ಹಣವನ್ನು ಮರಳಿ ಪಡೆಯಲು ಸಾವಿರಾರು ಕುಟುಂಬಗಳು ನಡೆಸುತ್ತಿರುವ ಶಾಂತಿಯುತ ಮತ್ತು ಕಾನೂನುಬದ್ಧ ಹೋರಾಟವಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

ಪಾದಯಾತ್ರೆ ಮತ್ತು ಧರಣಿ ಶಾಂತಿಯುತವಾಗಿ ನಡೆಯಲು ಪೊಲೀಸ್ ಇಲಾಖೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಭದ್ರತೆ ಮತ್ತು ಸಹಕಾರ ನೀಡಬೇಕು ಎಂದು ವೇದಿಕೆ ಮನವಿ ಮಾಡಿದೆ.

ಸುದ್ದಿಗೋಷ್ಠಿಯಲ್ಲಿ ಮಸುದ್, ಜಾಫರ್, ಮಹೇರುನ್ ನಿಸಾ, ಸೈಯದ್ ಹಸನ, ಭಾಷಾ, ಸುಲ್ತಾನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸೆ.4ರಂದು ಇಸ್ಕಾನ್ ಶ್ರೀಕೃಷ್ಣ ಜನ್ಮಾಷ್ಟಮಿ ಮಹೋತ್ಸವ



ರಾಯಚೂರು: ಆಧ್ಯಾತ್ಮಿಕತೆ, ಭಾರತೀಯ ಸಂಸ್ಕೃತಿ ಹಾಗೂ ಸಮಾಜಮುಖಿ ಸೇವೆಗಳ ಮೂಲಕ ಜಿಲ್ಲೆಯ ಜನರೊಂದಿಗೆ ನಿರಂತರ ಸಂಪರ್ಕ ಹೊಂದಿರುವ ಇಸ್ಕಾನ್ ರಾಯಚೂರು ವತಿಯಿಂದ ಸೆ.4ರಂದು ಶ್ರೀಕೃಷ್ಣ ಜನ್ಮಾಷ್ಟಮಿ ಮಹೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಇಸ್ಕಾನ್ ರಾಯಚೂರು ಕೇಂದ್ರ ವ್ಯವಸ್ಥಾಪಕ ಸಾರಥಿ ಶ್ಯಾಮ ದಾಸ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜನ್ಮಾಷ್ಟಮಿ ಮಹೋತ್ಸವಕ್ಕೆ ಹತ್ತಾರು ಸಾವಿರ ಭಕ್ತರು ಹಾಗೂ ಸಾರ್ವಜನಿಕರು ಆಗಮಿಸುವ ನಿರೀಕ್ಷೆಯಿದೆ. ಭಕ್ತರಿಗೆ ಸುಗಮ ದರ್ಶನ, ಕುಡಿಯುವ ನೀರು, ಸರತಿ ಸಾಲಿನ ವ್ಯವಸ್ಥೆ ಹಾಗೂ ಉಚಿತ ಮಹಾಪ್ರಸಾದ ವಿತರಣೆಗೆ ವಿಶೇಷ ಸಿದ್ಧತೆ ಕೈಗೊಳ್ಳಲಾಗಿದೆ ಎಂದರು.

ಕಳೆದ ಒಂದು ವರ್ಷದಲ್ಲಿ ಇಸ್ಕಾನ್ ರಾಯಚೂರು ಧಾರ್ಮಿಕ ಚಟುವಟಿಕೆಗಳಿಗೆ ಮಾತ್ರ ಸೀಮಿತವಾಗದೆ ಗೋಸೇವೆ, ಅನ್ನದಾನ, ಯುವಜನರ ವ್ಯಕ್ತಿತ್ವ ವಿಕಸನ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳ ಮೂಲಕ ಸಮಾಜಮುಖಿ ಸೇವೆಗಳನ್ನು ವಿಸ್ತರಿಸಿದೆ. ದೇವಾಲಯದ ಆವರಣದಲ್ಲಿರುವ ಶ್ರೀ ನಂದ ಗೋಶಾಲೆಯಲ್ಲಿ ಸುಮಾರು 50 ಜಾನುವಾರುಗಳಿಗೆ ನಿರಂತರ ಆರೈಕೆ, ಪೌಷ್ಟಿಕ ಆಹಾರ ಹಾಗೂ ಅಗತ್ಯ ವೈದ್ಯಕೀಯ ಸೇವೆ ಒದಗಿಸಲಾಗುತ್ತಿದೆ. ಗೋಸಂರಕ್ಷಣೆ ಮತ್ತು ಗೋಸೇವೆಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಸಾವಿರಾರು ಯಾತ್ರಿಕರು, ಸ್ಥಳೀಯ ಭಕ್ತರು ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಮಹಾಪ್ರಸಾದ ಮತ್ತು ಉಚಿತ ಅನ್ನದಾನ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಹರಿನಾಮ ಸಂಕೀರ್ತನೆ, ಭಾನುವಾರದ ವಿಶೇಷ ಉತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಸಂದರ್ಭದಲ್ಲಿಯೂ ಅನ್ನದಾನ ಸೇವೆ ನಿರಂತರವಾಗಿ ನಡೆಯುತ್ತಿದೆ ಎಂದು ಹೇಳಿದರು.

ಯುವಜನತೆ ಹಾಗೂ ವಿದ್ಯಾರ್ಥಿಗಳಲ್ಲಿ ನೈತಿಕ ಮೌಲ್ಯ, ಭಾರತೀಯ ಸಂಸ್ಕೃತಿ ಮತ್ತು ಆಧ್ಯಾತ್ಮಿಕ ಚಿಂತನೆ ಬೆಳೆಸುವ ಉದ್ದೇಶದಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಕಾರ್ಯಾಗಾರಗಳು, ವಿಚಾರ ಸಂಕಿರಣಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಭಗವದ್ಗೀತೆ ಅಧ್ಯಯನ ವಲಯಗಳನ್ನು ಆಯೋಜಿಸಲಾಗುತ್ತಿದೆ. ಇಂತಹ ಕಾರ್ಯಕ್ರಮಗಳಿಗೆ ಯುವ ಸಮುದಾಯದಿಂದ ಉತ್ತಮ ಸ್ಪಂದನೆ ದೊರೆಯುತ್ತಿದೆ ಎಂದರು.

ಶ್ರೀ ರಾಧಾ ಶ್ಯಾಮಚಂದ್ರ ಮಂದಿರದ ಶಾಶ್ವತ ಸಂಕೀರ್ಣ ನಿರ್ಮಾಣ ಕಾಮಗಾರಿಯೂ ಹಂತ ಹಂತವಾಗಿ ಪ್ರಗತಿಯಲ್ಲಿದೆ. ನೆಲ ಮಹಡಿಯ ಅನ್ನದಾನ ಸಭಾಂಗಣದ ಕಾಮಗಾರಿ ಪೂರ್ಣಗೊಂಡಿದ್ದು, ಮುಂದಿನ ಹಂತದಲ್ಲಿ ಮೊದಲ ಮಹಡಿಯಲ್ಲಿ ದೇವಾಲಯದ ಸಭಾಂಗಣ ನಿರ್ಮಾಣ ಕಾರ್ಯ ಆರಂಭಿಸಲು ಸಿದ್ಧತೆ ನಡೆದಿದೆ ಎಂದು ತಿಳಿಸಿದರು.

ಸೆ.4ರಂದು ನಡೆಯುವ ಶ್ರೀಕೃಷ್ಣ ಜನ್ಮಾಷ್ಟಮಿ ಮಹೋತ್ಸವದ ಅಂಗವಾಗಿ ದಿನವಿಡೀ ನಿರಂತರ ಹರಿನಾಮ ಸಂಕೀರ್ತನೆ, ಹರೇ ಕೃಷ್ಣ ಮಹಾಮಂತ್ರದ ಸಾಮೂಹಿಕ ಜಪ ಹಾಗೂ ಭಗವದ್ಗೀತೆ ಪಠಣ ನಡೆಯಲಿದೆ. ಶ್ರೀಕೃಷ್ಣನಿಗೆ ಪವಿತ್ರ ದ್ರವ್ಯಗಳು, ಹಣ್ಣಿನ ರಸ ಹಾಗೂ ವಿವಿಧ ಪುಷ್ಪಗಳಿಂದ ಭವ್ಯ ಅಭಿಷೇಕ ನೆರವೇರಿಸಲಾಗುವುದು. ಮಧ್ಯರಾತ್ರಿ ಶ್ರೀಕೃಷ್ಣ ಜನ್ಮದ ಪವಿತ್ರ ಕ್ಷಣದಲ್ಲಿ ವಿಶೇಷ ಮಹಾ ಆರತಿ ನಡೆಯಲಿದ್ದು, ಶಂಖನಾದ, ದೀಪಾರಾಧನೆ ಹಾಗೂ ಭಕ್ತಿಗೀತೆಗಳ ನಡುವೆ ಶ್ರೀಕೃಷ್ಣ ಜನ್ಮೋತ್ಸವವನ್ನು ಸಂಭ್ರಮದಿಂದ ಆಚರಿಸಲಾಗುವುದು ಎಂದು ಸಾರಥಿ ಶ್ಯಾಮ ದಾಸ ಹೇಳಿದರು.

ಭಕ್ತರ ಹೆಚ್ಚಿನ ಸಂಖ್ಯೆಯ ಆಗಮನವನ್ನು ಗಮನದಲ್ಲಿಟ್ಟುಕೊಂಡು ತ್ವರಿತ ದರ್ಶನಕ್ಕಾಗಿ ವಿಶೇಷ ಏಕಸಾಲಿನ ಸರತಿ ವ್ಯವಸ್ಥೆ ಮಾಡಲಾಗಿದೆ. ನಿರಂತರ ಕುಡಿಯುವ ನೀರಿನ ವ್ಯವಸ್ಥೆಯೊಂದಿಗೆ ಹಿರಿಯ ನಾಗರಿಕರು ಹಾಗೂ ವಿಶೇಷ ಅಗತ್ಯವಿರುವ ಭಕ್ತರಿಗೆ ಅಗತ್ಯ ಸೌಲಭ್ಯ ಕಲ್ಪಿಸಲಾಗುವುದು. ಪ್ರತಿಯೊಬ್ಬ ಭಕ್ತರಿಗೂ ಮಹಾಪ್ರಸಾದ ದೊರೆಯುವಂತೆ ದಿನವಿಡೀ ಉಚಿತ ಆಹಾರ ವಿತರಣಾ ಕೌಂಟರ್‌ಗಳು ಕಾರ್ಯನಿರ್ವಹಿಸಲಿವೆ ಎಂದರು.

ಈ ಬಾರಿಯ ಜನ್ಮಾಷ್ಟಮಿ ಆಚರಣೆಗೆ ಇಸ್ಕಾನ್ 6050 ಮೈಲಿಗಲ್ಲು ಅಭಿಯಾನವೂ ವಿಶೇಷ ಮೆರುಗು ನೀಡಲಿದೆ. 1966ರಲ್ಲಿ ನ್ಯೂಯಾರ್ಕ್ ನಗರದಲ್ಲಿ ಸಂಸ್ಥಾಪಕ ಆಚಾರ್ಯ ಎ.ಸಿ. ಭಕ್ತಿವೇದಾಂತ ಸ್ವಾಮಿ ಶ್ರೀಲ ಪ್ರಭುಪಾದರು ಅಂತರರಾಷ್ಟ್ರೀಯ ಕೃಷ್ಣ ಪ್ರಜ್ಞಾ ಸಂಘವನ್ನು ಸ್ಥಾಪಿಸಿದ್ದು, 2026ರಲ್ಲಿ ಸಂಸ್ಥೆಯ ಸ್ಥಾಪನೆಗೆ 60 ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಇಸ್ಕಾನ್ 60 ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

2027ರಲ್ಲಿ ಶ್ರೀಲ ಪ್ರಭುಪಾದರ ತಿರೋಭವದ 50ನೇ ವಾರ್ಷಿಕೋತ್ಸವ ನಡೆಯಲಿದ್ದು, ಅವರ ಆಧ್ಯಾತ್ಮಿಕ ಸಂದೇಶ ಹಾಗೂ ಕೃಷ್ಣ ಪ್ರಜ್ಞೆಯ ವಿಶ್ವವ್ಯಾಪಿ ಪ್ರಸಾರಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಪ್ರಭುಪಾದ 50 ಅಭಿಯಾನಕ್ಕೂ ಮಹತ್ವ ನೀಡಲಾಗಿದೆ. ಇದರ ಅಂಗವಾಗಿ ರಾಯಚೂರಿನಲ್ಲಿ ಶ್ರೀಲ ಪ್ರಭುಪಾದರ ಭಗವದ್ಗೀತೆ ಯಥಾರೂಪ ಸೇರಿದಂತೆ ವೈದಿಕ ಸಾಹಿತ್ಯವನ್ನು ಜನರಿಗೆ ವ್ಯಾಪಕವಾಗಿ ತಲುಪಿಸುವ ಸಾಹಿತ್ಯ ಅಭಿಯಾನ ನಡೆಸಲಾಗುವುದು ಎಂದರು.

ಇಸ್ಕಾನ್‌ನ 60 ವರ್ಷಗಳ ಪಯಣದ ಸ್ಮರಣಾರ್ಥ ಶ್ರೀ ರಾಧಾ ಶ್ಯಾಮಚಂದ್ರ ಮಂದಿರ ನಿರ್ಮಾಣ ಯೋಜನೆಗೆ ಮತ್ತಷ್ಟು ವೇಗ ನೀಡಲಾಗುವುದು. ಭಕ್ತರು ಹಾಗೂ ದಾನಿಗಳು ಇಸ್ಕಾನ್‌ನ ವಿವಿಧ ಆಧ್ಯಾತ್ಮಿಕ ಮತ್ತು ಸಮಾಜ ಸೇವಾ ಚಟುವಟಿಕೆಗಳಲ್ಲಿ ಪಾಲ್ಗೊಂಡು ತಮ್ಮ ಸೇವಾ ಕೊಡುಗೆ ನೀಡಬಹುದು ಎಂದು ತಿಳಿಸಿದರು.

ಶ್ರೀಕೃಷ್ಣ ಜನ್ಮಾಷ್ಟಮಿ ಮಹೋತ್ಸವವು ಸೆ.4ರಂದು ನಗರದ ಸ್ಟೇಷನ್ ರಸ್ತೆಯಲ್ಲಿರುವ ಇಸ್ಕಾನ್ ಶ್ರೀ ರಾಧಾ ಶ್ಯಾಮಚಂದ್ರ ಮಂದಿರದಲ್ಲಿ ನಡೆಯಲಿದ್ದು, ಕಾರ್ಯಕ್ರಮಕ್ಕೆ ಪ್ರವೇಶ ಉಚಿತವಾಗಿದ್ದು ಎಲ್ಲ ಭಕ್ತರು ಹಾಗೂ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಅಭಿಷೇಕ್, ಶ್ರೀನಿವಾಸ್, ಶಶಿಮುಖಿ ಸಖಿ ದೇವಿದಾಸಿ, ಪರನಂದಿನಿ ಲಲಿತಾ ದೇವಿದಾಸಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಶ್ವಿನಿ, ಭೂಮಾನಂದ ಸೇರಿ ನಾಲ್ಕು ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಲು ಛಲವಾದಿ ಮಹಾಸಭಾ ಆಗ್ರಹ



ರಾಯಚೂರು: ಜಿಲ್ಲೆಯಲ್ಲಿ ವರದಿಯಾಗಿರುವ ಕುಮಾರಿ ಅಶ್ವಿನಿ ಅತ್ಯಾಚಾರ ಮತ್ತು ಕೊಲೆ ಪ್ರಕರಣ, ಭೂಮಾನಂದ ಹದ್ದಿನಾಳ ಕೊಲೆ ಪ್ರಕರಣ ಸೇರಿದಂತೆ ರಾಣೆಮ್ಮ ಕರಡಕಲ್ ಹಾಗೂ ಮೇಘನಾಥ್ ಗಿಲ್ಲೆ ಸುಗೂರು ಅವರ ಕೊಲೆ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಿ, ನೊಂದ ಕುಟುಂಬಗಳಿಗೆ ನ್ಯಾಯ ಒದಗಿಸಬೇಕು ಎಂದು ಛಲವಾದಿ ಮಹಾಸಭಾ ಜಿಲ್ಲಾ ಸಮಿತಿ ಆಗ್ರಹಿಸಿದೆ.

ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಸಣ್ಣ ನೀರಾವರಿ ಸಚಿವ ಡಾ. ಅಜಯ್ ಸಿಂಗ್ ಅವರಿಗೆ ಮನವಿ ಸಲ್ಲಿಸಿದ ಮಹಾಸಭಾ ಪದಾಧಿಕಾರಿಗಳು, ರಾಯಚೂರು ಜಿಲ್ಲೆಯಲ್ಲಿ ದಲಿತ ಸಮುದಾಯದವರ ಮೇಲೆ ನಡೆಯುತ್ತಿರುವ ಅತ್ಯಾಚಾರ, ಕೊಲೆ ಹಾಗೂ ದೌರ್ಜನ್ಯ ಪ್ರಕರಣಗಳ ಕುರಿತು ಆತಂಕ ವ್ಯಕ್ತಪಡಿಸಿದ್ದಾರೆ.

ಹೊಕ್ರಾಣಿ ಗ್ರಾಮದಲ್ಲಿ ಆ.19ರಂದು ಸಂಜೆ ಸುಮಾರು 6.30ರ ವೇಳೆಗೆ ಬಹಿರ್ದೆಸೆಗೆಂದು ಮನೆಯಿಂದ ಹೊರಗೆ ತೆರಳಿದ್ದ ಕುಮಾರಿ ಅಶ್ವಿನಿ ಮೇಲೆ ಕೆಲವರು ಸಾಮೂಹಿಕ ಅತ್ಯಾಚಾರ ನಡೆಸಿ ಕೊಲೆ ಮಾಡಿದ್ದಾರೆ ಹಾಗೂ ನಂತರ ಮೃತದೇಹವನ್ನು ಬಾವಿಗೆ ಎಸೆದಿದ್ದಾರೆ ಎಂಬ ಆರೋಪದ ಪ್ರಕರಣ ಅತ್ಯಂತ ಅಮಾನವೀಯವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಅದೇ ರೀತಿ ಆ.4ರಂದು ಸಂಜೆ ಸುಮಾರು 6 ಗಂಟೆಗೆ ಸುಂಕೇಶ್ವರಾಳ ಗ್ರಾಮದಲ್ಲಿ ಭೂಮಾನಂದ ಹದ್ದಿನಾಳ ಅವರನ್ನು ಕೊಲೆ ಮಾಡಲಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಲಿಂಗಸುಗೂರು ತಾಲೂಕಿನ ಕರಡಕಲ್ ಗ್ರಾಮದ ರಾಣೆಮ್ಮ ಅವರ ಮೇಲೂ ಅತ್ಯಾಚಾರ ನಡೆಸಿ ಕೊಲೆ ಮಾಡಲಾಗಿದೆ ಎಂಬ ಪ್ರಕರಣ ಹಾಗೂ ಮೇಘನಾಥ್ ಗಿಲ್ಲೆ ಸುಗೂರು ಅವರ ಕೊಲೆ ಪ್ರಕರಣಗಳ ಬಗ್ಗೆಯೂ ಸಮಗ್ರ ತನಿಖೆ ನಡೆಸಬೇಕೆಂದು ಮಹಾಸಭಾ ಒತ್ತಾಯಿಸಿದೆ.

ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ಹಾಗೂ ಕೊಲೆ ಪ್ರಕರಣಗಳು ಮರುಕಳಿಸುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇಂತಹ ಘಟನೆಗಳ ತನಿಖೆಯಲ್ಲಿ ಯಾವುದೇ ರೀತಿಯ ರಾಜಕೀಯ ಅಥವಾ ಇತರ ಪ್ರಭಾವಗಳಿಗೆ ಅವಕಾಶ ನೀಡದೆ ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕು ಎಂದು ಮಹಾಸಭಾ ಆಗ್ರಹಿಸಿದೆ.

ಕೆಲವು ಪ್ರಕರಣಗಳಲ್ಲಿ ಆರೋಪಿಗಳನ್ನು ಕೈಬಿಡುವ ಪ್ರಯತ್ನ ನಡೆಯುತ್ತಿದೆ ಎಂಬ ಅನುಮಾನ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ ಎಂದು ಮನವಿಯಲ್ಲಿ ಆರೋಪಿಸಿರುವ ಪದಾಧಿಕಾರಿಗಳು, ಇಂತಹ ಅನುಮಾನಗಳಿಗೆ ಅವಕಾಶವಿಲ್ಲದಂತೆ ಪ್ರಕರಣಗಳ ತನಿಖೆಯನ್ನು ಪಾರದರ್ಶಕವಾಗಿ ನಡೆಸುವುದು ಅಗತ್ಯವಾಗಿದೆ ಎಂದು ತಿಳಿಸಿದ್ದಾರೆ.

ಅಶ್ವಿನಿ, ಭೂಮಾನಂದ, ರಾಣೆಮ್ಮ ಹಾಗೂ ಮೇಘನಾಥ್ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಿ, ಪ್ರಕರಣಗಳ ಹಿಂದಿನ ಸತ್ಯಾಂಶವನ್ನು ಹೊರತರುವಂತೆ ಸಮಗ್ರ ತನಿಖೆ ನಡೆಸಬೇಕು. ತನಿಖೆಯಲ್ಲಿ ದೊರೆಯುವ ಸಾಕ್ಷ್ಯಾಧಾರಗಳ ಆಧಾರದ ಮೇಲೆ ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನಿನಡಿ ಕಠಿಣ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಲಾಗಿದೆ.

ಪ್ರಕರಣಗಳಿಂದ ನೊಂದ ಕುಟುಂಬಗಳಿಗೆ ಸೂಕ್ತ ಪರಿಹಾರ, ಕಾನೂನು ನೆರವು ಹಾಗೂ ಅಗತ್ಯ ಭದ್ರತೆ ಒದಗಿಸಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಪರಿಣಾಮಕಾರಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಛಲವಾದಿ ಮಹಾಸಭಾ ಜಿಲ್ಲಾ ಸಮಿತಿ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾದ ರಾಜ್ಯ ನಿರ್ದೇಶಕ ಎಂ. ವಸಂತ, ಜಿಲ್ಲಾಧ್ಯಕ್ಷ ವಿಶ್ವನಾಥ್ ಪಟ್ಟಿ, ಪ್ರಧಾನ ಕಾರ್ಯದರ್ಶಿ ತಮ್ಮಣ್ಣ ವಕೀಲರು, ಉಪಾಧ್ಯಕ್ಷರಾದ ಬಾಬು ಬಾಜಿ ಮತ್ತು ಪುಷ್ಪರಾಜ್, ಜಂಟಿ ಕಾರ್ಯದರ್ಶಿ ವಿಜಯ ಪ್ರಸಾದ್ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ದೇವರ ಗೆದ್ದ ಮಾನವ ಕವನ ಸಂಕಲನ ಜನಾರ್ಪಣೆ




ರಾಯಚೂರು: ಆ.31: ಕವಿ ತಿಮ್ಮಯ್ಯ ರಾಯಚೂರು ಅವರು ತಮ್ಮ ಬರವಣಿಗೆಯಲ್ಲಿ ಡಾ. ರಾಜ್‌ಕುಮಾರ್ ಅವರ ಮೇಲಿನ ಅಪಾರ ಪ್ರೀತಿ, ಭಕ್ತಿ ಹಾಗೂ ವಿವಿಧ ಭಾವನೆಗಳನ್ನು ಅತ್ಯಂತ ಸುಂದರವಾಗಿ ಕಟ್ಟಿಕೊಟ್ಟಿದ್ದಾರೆ ಎಂದು ಹಿರಿಯ ಸಾಹಿತಿ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಡಾ. ಬಸವಪ್ರಭು ಪಾಟೀಲ ಬೆಟ್ಟದೂರು ಹೇಳಿದರು.

ನಗರದ ಕನ್ನಡ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ರಾಯಚೂರು ವತಿಯಿಂದ ಭಾನುವಾರ ಸಂಜೆ ಆಯೋಜಿಸಿದ್ದ ಕವಿ ತಿಮ್ಮಯ್ಯ ರಾಯಚೂರು ಅವರ ದೇವರ ಗೆದ್ದ ಮಾನವ ಕವನ ಸಂಕಲನ ಜನಾರ್ಪಣೆ ಸಮಾರಂಭದಲ್ಲಿ ಕೃತಿ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

"ಒಳ್ಳೆಯ ಮನುಷ್ಯನಾಗದೆ ಇದ್ದರೆ ಒಳ್ಳೆಯ ಕವಿಯಾಗಲು ಸಾಧ್ಯವಿಲ್ಲ" ಎಂಬ ಮಾತಿನಂತೆ ಡಾ. ರಾಜ್‌ಕುಮಾರ್ ಅವರು ಉತ್ತಮ ವ್ಯಕ್ತಿತ್ವದ ಮೂಲಕ ಮಹಾನ್ ವ್ಯಕ್ತಿಯಾಗಿ ಬದುಕಿದರು. ತಿಮ್ಮಯ್ಯ ಅವರು ಈಗಾಗಲೇ ಡಾ. ರಾಜ್‌ಕುಮಾರ್ ಕುರಿತು ಮೂರು ಕೃತಿಗಳನ್ನು ರಚಿಸಿರುವುದು ಅವರ ಮೇಲಿನ ನಿರಂತರ ಅಭಿಮಾನ ಮತ್ತು ಸಮರ್ಪಣಾ ಭಾವಕ್ಕೆ ಸಾಕ್ಷಿಯಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಸತ್ವಶಾಲಿ ಕವನಗಳನ್ನು ರಚಿಸಿ ಉತ್ತಮ ಕವಿಯಾಗಿ ಬೆಳೆಯಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಯಾಗಿದ್ದ ಹಟ್ಟಿ ಚಿನ್ನದ ಗಣಿಯ ಸಾಹಿತಿ ಮಹೇಂದ್ರ ಕುರ್ಡಿ ಕೃತಿ ಪರಿಚಯಿಸಿ ಮಾತನಾಡಿ, ಅಭಿಮಾನಿಗಳೇ ದೇವರು ಎಂಬ ಭಾವನೆಯೊಂದಿಗೆ ಬದುಕಿದ ಡಾ. ರಾಜ್‌ಕುಮಾರ್ ಅವರ ವ್ಯಕ್ತಿತ್ವ ಮತ್ತು ಸಾಧನೆಯನ್ನು ಕೃತಿಯಲ್ಲಿ ಪರಿಣಾಮಕಾರಿಯಾಗಿ ಚಿತ್ರಿಸಲಾಗಿದೆ. ಈ ಕವನಗಳಲ್ಲಿ ಕೇವಲ ಅವರ ಜೀವನವಷ್ಟೇ ಅಲ್ಲದೆ ಜೀವನ ತತ್ವ, ಸಾಮಾಜಿಕ ಆಶಯ, ಅಧರ್ಮದಿಂದ ಧರ್ಮದತ್ತ, ಅಜ್ಞಾನದಿಂದ ಸುಜ್ಞಾನದತ್ತ ಹಾಗೂ ಕತ್ತಲೆಯಿಂದ ಬೆಳಕಿನತ್ತ ಸಾಗುವ ಸಂದೇಶಗಳು ಅಡಕವಾಗಿವೆ ಎಂದರು.

ಸಾಹಿತಿ ವೀರಹನುಮಾನ ಮಾತನಾಡಿ, ಡಾ. ರಾಜ್‌ಕುಮಾರ್ ಅವರ ವ್ಯಕ್ತಿತ್ವ, ಚಿತ್ರಗಳು ಹಾಗೂ ಚಲನಚಿತ್ರಗಳ ಶೀರ್ಷಿಕೆಗಳನ್ನು ಆಧರಿಸಿ ಕವನಗಳನ್ನು ರಚಿಸಿರುವುದು ಅಪರೂಪದ ಸಾಹಿತ್ಯಿಕ ಪ್ರಯತ್ನವಾಗಿದೆ. ಹಾಲುಜೇನು ಸೇರಿದಂತೆ ಹಲವು ಚಲನಚಿತ್ರಗಳ ಶೀರ್ಷಿಕೆಗಳು, ಹೈಕು ಹಾಗೂ ಚುಟುಕುಗಳನ್ನು ಬಳಸಿಕೊಂಡಿರುವುದು ಕೃತಿಯ ವಿಶೇಷತೆ ಎಂದು ಹೇಳಿದರು.

ಕೃತಿಕಾರ ತಿಮ್ಮಯ್ಯ ಮಾತನಾಡಿ, ಹಿರಿಯರ ಮಾರ್ಗದರ್ಶನದಂತೆ ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಕವನ ಸಂಕಲನಗಳನ್ನು ಹೊರತರುವ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿ, ಕೃತಿ ಪ್ರಕಟಣೆಗೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಬಿ. ವಿಜಯ ರಾಜೇಂದ್ರ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಬಡತನದ ನಡುವೆಯೂ ಲಿಫ್ಟ್‌ಮ್ಯಾನ್ ಕಾಯಕದೊಂದಿಗೆ ಸಾಹಿತ್ಯ ಸೇವೆಯಲ್ಲಿ ತೊಡಗಿಸಿಕೊಂಡಿರುವ ತಿಮ್ಮಯ್ಯ ಅವರ ಪರಿಶ್ರಮ ಶ್ಲಾಘನೀಯ. ಈಗಾಗಲೇ ಮೂರು ಕೃತಿಗಳನ್ನು ಹೊರತಂದಿದ್ದು, ಮುಂದೆಯೂ ಹೆಚ್ಚಿನ ಕೃತಿಗಳು ಅವರಿಂದ ಪ್ರಕಟವಾಗಲಿ ಎಂದು ಶುಭ ಹಾರೈಸಿದರು.

ಸಾಹಿತಿಗಳಾದ ಬಾಬು ಭಂಡಾರಿಗಲ್, ಮ್ಯಾದಾರ್ ಲಲಿತಕಲಾ ಪ್ರತಿಷ್ಠಾನದ ಅಧ್ಯಕ್ಷ ಹೆಚ್. ಹೆಚ್. ಮ್ಯಾದಾರ್, ಹೊಸಮನಿ ಪ್ರಕಾಶನದ ಅಧ್ಯಕ್ಷ ಬಷೀರ್ ಅಹಮ್ಮದ್ ಹೊಸಮನಿ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಕಾರ್ಯದರ್ಶಿ ದಂಡಪ್ಪ ಬಿರಾದಾರ್ ಸ್ವಾಗತಿಸಿದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಪ್ರತಿಭಾ ಗೋನಾಳ ಪ್ರಾರ್ಥಿಸಿ ಕಾರ್ಯಕ್ರಮ ನಿರೂಪಿಸಿದರು. ಮಹಿಳಾ ಪ್ರತಿನಿಧಿ ದೇವೇಂದ್ರಮ್ಮ ವಂದಿಸಿದರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಸಕ್ತರು, ಸಾರ್ವಜನಿಕರು, ತಿಮ್ಮಯ್ಯ ಅವರ ಕುಟುಂಬದ ಸದಸ್ಯರು ಹಾಗೂ ಸ್ನೇಹಿತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ರಾಹುಲ್ ಗಾಂಧಿ ವಿರುದ್ಧ ಎಫ್‌ಐರ್ ಖಂಡಿಸಿ ಇಂದು ಕಾಂಗ್ರೆಸ್ ಪ್ರತಿಭಟನೆ



ರಾಯಚೂರು, ಆ.31: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹಲ್ದ್ವಾನಿ ರ‍್ಯಾಲಿಯ ಬಳಿಕ ನಡೆದ ಘಟನೆಗೆ ಸಂಬಂಧಿಸಿದಂತೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಉತ್ತರಾಖಂಡ ಪೊಲೀಸರು ಎಫ್‌ಐಆರ್ ದಾಖಲಿಸಿರುವುದನ್ನು ಖಂಡಿಸಿ ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಇಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಪ್ರತಿಭಟನಾ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಸವರಾಜ ಪಾಟೀಲ್ ಇಟಗಿ ತಿಳಿಸಿದ್ದಾರೆ.

ಹಲ್ದ್ವಾನಿಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರ ರ‍್ಯಾಲಿ ನಡೆದ ಸ್ಥಳದಲ್ಲಿ ಬಿಜೆಪಿ-ಆರ್‌ಎಸ್‌ಎಸ್ ಕಾರ್ಯಕರ್ತರು ಎನ್ನಲಾದವರು "ಶುದ್ಧೀಕರಣ ಆಚರಣೆ" ನಡೆಸಿದ್ದು ಜಾತಿವಾದಿ ಹಾಗೂ ಸಾಂವಿಧಾನಿಕ ಮೌಲ್ಯಗಳಿಗೆ ಅವಮಾನಕಾರಿ ಕೃತ್ಯವಾಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಈ ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಂಡು ಎಫ್‌ಐಆರ್ ದಾಖಲಿಸಬೇಕೆಂದು ರಾಹುಲ್ ಗಾಂಧಿ ಆಗ್ರಹಿಸಿದ್ದರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಆದರೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವ ಬದಲು ಉತ್ತರಾಖಂಡ ಪೊಲೀಸರು ಹಲ್ದ್ವಾನಿ ನಗರದ ಕೊತ್ವಾಲಿ ಪೊಲೀಸ್ ಠಾಣೆಯಲ್ಲಿ ರಾಹುಲ್ ಗಾಂಧಿ ವಿರುದ್ಧವೇ ಎಫ್‌ಐಆರ್ ದಾಖಲಿಸಿರುವುದು ಖಂಡನೀಯ. ಇದು ರಾಜಕೀಯ ಸೇಡಿನ ಕ್ರಮವಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಆರೋಪಿಸಿದೆ.

ಈ ಕ್ರಮವನ್ನು ಖಂಡಿಸುವುದರ ಜೊತೆಗೆ, ಘಟನೆಗೆ ಕಾರಣರಾದವರ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಪ್ರತಿಭಟನಾ ಧರಣಿ ನಡೆಸಲಾಗುತ್ತಿದೆ ಎಂದು ತಿಳಿಸಲಾಗಿದೆ.

ಪ್ರತಿಭಟನೆಯಲ್ಲಿ ಸಚಿವರು, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಶಾಸಕರು, ಮಾಜಿ ವಿಧಾನ ಪರಿಷತ್ ಸದಸ್ಯರು, 2023ರ ವಿಧಾನಸಭಾ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿಗಳು, ಕೆಪಿಸಿಸಿ ಪದಾಧಿಕಾರಿಗಳು, ಜಿಲ್ಲಾ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಮುಂಚೂಣಿ ಘಟಕಗಳ ಅಧ್ಯಕ್ಷರು, ವಿವಿಧ ವಿಭಾಗಗಳ ಜಿಲ್ಲಾಧ್ಯಕ್ಷರು, ಮಹಾನಗರ ಪಾಲಿಕೆಯ ಮಾಜಿ ಮಹಾಪೌರರು, ಮಾಜಿ ಉಪಮಹಾಪೌರರು, ಮಾಜಿ ಸದಸ್ಯರು ಹಾಗೂ ವಿವಿಧ ಹಂತದ ಚುನಾಯಿತ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಜಿಲ್ಲೆಯ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಭಾಗವಹಿಸಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಸವರಾಜ ಪಾಟೀಲ್ ಇಟಗಿ ಮನವಿ ಮಾಡಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K